₹ 6 @vishwavaninews epaper.vishwavani.news vishwavani.news **ಬೆಂಗಳೂರು** | ಹುಬ್ಬಳ್ಳಿ | ಮಂಗಳೂರು | ದಾವಣಗೆರೆ | ಕಲಬುರಗಿ | ಬೆಳಗಾವಿ **ಮಂಗಳವಾರ 12.11.2024** **ಸಂಪುಟ:** 9 **ಸಂಚಿಕೆ:** 323 **ಪುಟಗಳು:** 14 ಪ್ರಧಾನ ಸಂಪಾದಕ: ವಿಶ್ವೇಶ್ವರ ಭಟ್

ವಿಶ್ವವಾಣಿ
ವಿಶ್ವಾಸವೇ ವಿಶ್ವ

ದಾರಿದೀಪೋಕ್ತಿ

ಪ್ರತಿ ದಿನವೂ ನಿಮ್ಮ ಪಾಲಿಗೆ ಒಂದು ಒಳ್ಳೆಯ ಅವಕಾಶವಾಗಲಿ. ಉತ್ತಮ ವ್ಯಕ್ತಿಯಾಗಲು, ತಪ್ಪುಗಳನ್ನು ತಿದ್ದಿಕೊಳ್ಳಲು, ನಿನ್ನೆಯ ಸಾಧನೆಯನ್ನು ಮತ್ತಷ್ಟು ಉತ್ತಮಪಡಿಸಿಕೊಳ್ಳಲು, ಇನ್ನಷ್ಟು ಪರೋಪಕಾರಿಯಾಗಲು, ಸಮಾಜಮುಖಿಯಾಗಲು ಅವಕಾಶವಾಗಲಿ. ಅದನ್ನು ನೀವು ಸಮರ್ಥವಾಗಿ ಬಳಸಿಕೊಳ್ಳುವಂತಾಗಲಿ.

ವಕ್ರತುಂಡೋಕ್ತಿ

ಕೆಲವು ಹೆಂಗಸರನ್ನು ಅವರ ಡ್ರೆಸ್ಸಿನಿಂದ ಅಳೆಯಬಾರದು. ಕಾರಣ ಅವರು ಅದನ್ನು ಅತಿ ಕಡಿಮೆ ಬಳಸಿರುತ್ತಾರೆ.

ಸ್ವತಂತ್ರ ಭಾರತದ 51ನೇ ಮುಖ್ಯ ನ್ಯಾಯಮೂರ್ತಿಯಾಗಿ ನ್ಯಾ.ಸಂಜೀವ್ ಖನ್ನಾ(64) ಸೋಮವಾರ ಪ್ರಮಾಣ ವಚನ ಸ್ವೀಕರಿಸಿದರು. ರಾಷ್ಟ್ರಪತಿ ಭವನದಲ್ಲಿ ನಡೆದ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರಮಾಣ ವಚನ ಬೋಧಿಸಿದರು.

ಪುಟ ತೆರೆದಂತೆ...

ಪ್ರತಿಷ್ಠೆಯೇ ಈ ಉಪಸಮರದ ಮೂಲ
ಅಶ್ವತ್ಥಕಟ್ಟೆ
ರಂಜಿತ್ ಎಚ್. ಅಶ್ವತ್ಥ
ಸಂ.ಪುಟ

ನಮಗೆ ಬೇಕಾದ್ದನ್ನು ಪಡೆವ ದಾರಿಯಿದು!
ವಿಶ್ವರಂಗ
ರಂಗಸ್ವಾಮಿ ಮೂಕನಹಳ್ಳಿ
ಸಂ.ಗಮ

ಮಾತಂದ್ರೆ ಮಾತು

ನೀವು ನನ್ನನ್ನು ತುಂಬಾ ಪ್ರೀತಿಸುತ್ತೀರಿ. ಆದರೆ ನನ್ನ ನ್ಯೂನತೆಗಳ ಬಗ್ಗೆ ನನಗೆ ಅರಿವಿದೆ. ಯಾವುದೇ ಕಲಾವಿದ ತನ್ನ ಕಲೆಗಿಂತ ದೊಡ್ಡವನಾಗಬಾರದು. ನಾನು ಇನ್ನೂ ಕಲಿಯಲು ಬಯಸುತ್ತೇನೆ. ಕಲೆಯೊಂದಿಗೆ ಸಂಪರ್ಕದಲ್ಲಿರಲು ನಾನು ಬಯಸುತ್ತೇನೆ. ದಯವಿಟ್ಟು ಇನ್ನು ಮುಂದೆ ನನ್ನನ್ನು ಉಳಗನಾಯಗನ್ (ವಿಶ್ವನಾಯಕ) ಎಂದು ಕರೆಯಬೇಡಿ. ನಿಮ್ಮ ಪ್ರೀತಿಗೆ ನಾನು ಸದಾ ಚಿರಋಣಿ.

-ಕಮಲ್ ಹಾಸನ್
ಹಿರಿಯ ನಟ

ಮೂರು ಕ್ಷೇತ್ರಗಳಲ್ಲಿ ನಾಳೆ ಮತದಾನ | ತಾರಕಕ್ಕೇರಿದ ಆರೋಪ-ಪ್ರತ್ಯಾರೋಪ

ಬಹಿರಂಗ ಪ್ರಚಾರಕ್ಕೆ ತೆರೆ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಮೂರೂ ಪಕ್ಷಗಳಿಗೆ ಪ್ರತಿಷ್ಠೆಯ ಕಣವಾಗಿದ್ದ ಉಪಸಮರದ ಬಹಿರಂಗ ಪ್ರಚಾರಕ್ಕೆ ತೆರೆಬಿದ್ದಿದ್ದು, ಮನೆ ಮನೆ ಪ್ರಚಾರ ಹಾಗೂ ಕತ್ತಲ ರಾತ್ರಿಯ ಚಮತ್ಕಾರದ ಲೆಕ್ಕಾಚಾರಗಳು ಶುರುವಾಗಿವೆ.

ಕೊನೆ ದಿನದ ಹೈಲೈಟ್ಸ್

- ಚನ್ನಪಟ್ಟಣ ಕ್ಷೇತ್ರದಲ್ಲಿ ಮೂರೂ ಪಕ್ಷಗಳ ಪ್ರಮುಖರ ಸಮಾಗಮ
- ದೇವೇಗೌಡರ ವಿರುದ್ಧ ಏಕವಚನದಲ್ಲೇ ಸಿದ್ದು ವಾಗ್ದಾಳಿ
- ಚನ್ನಪಟ್ಟಣದಲ್ಲಿಯೇ 3 ಪಕ್ಷಗಳ ಶಕ್ತಿ ಪ್ರದರ್ಶನ
- ಸಂಜೆ 4ರ ಬಳಿಕ ಮೂರು ಕ್ಷೇತ್ರವನ್ನು ಖಾಲಿ ಮಾಡಿದ ನಾಯಕರು
- ಡಿಕೆಶಿ, ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿದ ಮಾಜಿ ಪ್ರಧಾನಿ ದೇವೇಗೌಡ

ಕಾಂಗ್ರೆಸ್ ಮತ್ತು ಮೈತ್ರಿ ಪಕ್ಷಗಳ ನಾಯಕರು ಚನ್ನಪಟ್ಟಣ, ಶಿಗ್ಗಾವಿ ಹಾಗೂ ಸಂಡೂರು ವಿಧಾನಸಭಾ ಕ್ಷೇತ್ರಗಳಲ್ಲಿ ಅಬ್ಬರದ ಪ್ರಚಾರ ನಡೆಸಿ ಕೊನೆ ಗಳಿಗೆಯ ಮತ ಭೇಟೆ ನಡೆಸಿದರು. ಬುಧವಾರ ಮೂರು ಕ್ಷೇತ್ರಗಳಿಗೆ ಮತದಾನ ನಡೆಯಲಿದ್ದು, ನ.23ರಂದು ಫಲಿತಾಂಶ ಪ್ರಕಟವಾಗಲಿದೆ.

ನಿಖಿಲ್ ಕುಮಾರಸ್ವಾಮಿ ಪತ್ನಿ ರೇವತಿ ನಿಖಿಲ್ ಕುಮಾರ ಸ್ವಾಮಿ ಅವರು ಸೋಮವಾರ ಬೆಳಗ್ಗೆ ಚನ್ನಪಟ್ಟಣದ ವಿವಿಧೆಡೆ ಮತ ಯಾಚಿಸಿ, ವಿದ್ಯಾರ್ಥಿಗಳ ಜತೆ ಸೆಲ್ಫಿ ಕ್ಲಿಕ್ಕಿಸಿಕೊಂಡರು.

ಮಂಗಳವಾರ ಮನೆ ಮನೆಗೆ ತೆರಳಿ ಅಭ್ಯರ್ಥಿಗಳು ಪ್ರಚಾರ ನಡೆಸಲು ಮಾತ್ರ ಅವಕಾಶವಿದೆ. ಚನ್ನಪಟ್ಟಣದಲ್ಲಿ ಕೇಂದ್ರ ಸಚಿವ ಕುಮಾರಸ್ವಾಮಿ ಪುತ್ರ ನಿಖಿಲ್ ಕುಮಾರಸ್ವಾಮಿ ಸ್ಪರ್ಧಿಸಿದ್ದು, ಕಾಂಗ್ರೆಸ್‌ನಿಂದ ಸಿ.ಪಿ.ಯೋಗೇಶ್ವರ ಅಖಾಡಕ್ಕಿಳಿದಿದ್ದಾರೆ. ಈ ಕ್ಷೇತ್ರದ ಚುನಾವಣೆ ಕಾಂಗ್ರೆಸ್ ಮತ್ತು ಎನ್‌ಡಿಎ ಮೈತ್ರಿಕೂಟಕ್ಕೆ ಸವಾಲಾಗಿ ಪರಿಣಮಿಸಿದ್ದು, ಕ್ಷೇತ್ರದಲ್ಲಿ ಪ್ರಚಾರ ಹಾಗೂ ರಾಜಕೀಯ ಪಕ್ಷಗಳ ನಡುವೆ ಆರೋಪ ಪ್ರತ್ಯಾರೋಪಗಳು ತಾರಕಕ್ಕೇರಿವೆ.

ಈ ಬಾರಿಯ ಶಿಗ್ಗಾವಿ ಕ್ಷೇತ್ರದಲ್ಲೂ ಕಾಂಗ್ರೆಸ್ ಮತ್ತು ಬಿಜೆಪಿ ನಡುವೆ ಪೈಪೋಟಿ ಕಂಡು ಬಂದಿವೆ. ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಪುತ್ರ ಭರತ್ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದಾರೆ. ಕಾಂಗ್ರೆಸ್‌ನಿಂದ ಯಾಸಿರ್ ಅಹ್ಮದ್ ಪಠಾಣ ಸ್ಪರ್ಧಿಸಿದ್ದು, ಇಬ್ಬರ ನಡುವೆ ತೀವ್ರ ಪೈಪೋಟಿ ನಡೆದಿದೆ. ಮತ್ತೊಂದೆಡೆ ಸಂಡೂರಿನಲ್ಲಿ ಸಂಸದ ತುಕಾರಾಂ ಪತ್ನಿ ಅನ್ನಪೂರ್ಣ ಕಣಕ್ಕಿಳಿದಿದ್ದರೆ ಬಿಜೆಪಿಯಿಂದ ಬಂಗಾರು ಹನುಮಂತು ಸ್ಪರ್ಧಿಸಿದ್ದಾರೆ. ಈ ಕ್ಷೇತ್ರದಲ್ಲಿ ರಾಜಕೀಯ ನಾಯಕರು ಬಿರುಸಿನ ಪ್ರಚಾರ ನಡೆಸಿ ಮತಯಾಚಿಸಿದ್ದಾರೆ.

ಕೊನೆಯ ದಿನವೂ ಚನ್ನಪಟ್ಟಣವನ್ನೇ ಕೇಂದ್ರೀಕರಿಸಿ ಮೂರು ಪಕ್ಷದ ನಾಯಕರು ಪ್ರಚಾರ ನಡೆಸಿದ್ದು, ನಿಖಿಲ್ ಕುಮಾರಸ್ವಾಮಿ ಪರವಾಗಿ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ, ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಪ್ರಚಾರ ನಡೆಸಿದರೆ, ಸಿ.ಪಿ.ಯೋಗೇಶ್ವರ ಪರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಕೈ ನಾಯಕರು ಅಂತಿಮ ಕ್ಷಣದ ಒಲೈಕೆ ನಡೆಸಿದರು.

ನಾಯಕರ ಮಾತಿನೇಟು

- ದೇವೇಗೌಡರು, ಕುಮಾರಸ್ವಾಮಿ ಅವರು ಒಬ್ಬನೇ ಒಬ್ಬ ಒಕ್ಕಲಿಗರನ್ನೂ ಬೆಳೆಯಲು ಬಿಡಲ್ಲ: ಸಿದ್ದರಾಮಯ್ಯ
- ಸಿದ್ದರಾಮಯ್ಯ ಅವರನ್ನು ಹಣಕಾಸು ಸಚಿವರನ್ನಾಗಿ ಮಾಡಿದ್ದೇ ಈ ದೇವೇಗೌಡ: ಎಚ್.ಡಿ.ದೇವೇಗೌಡ
- ಕಾಂಗ್ರೆಸ್‌ಹಣ ಹಂಚಿಕೆ ಮಾಡುತ್ತಿದೆ: ಬೊಮ್ಮಾಯಿ

ದೇವೇಗೌಡರು ಮತ್ತು ಕುಮಾರ ಸ್ವಾಮಿ ಅವರು ಒಬ್ಬನೇ ಒಬ್ಬ ಒಕ್ಕಲಿಗರನ್ನೂ ಬೆಳೆಯಲು ಬಿಡಲ್ಲ. ಬುದ್ಧಿವಂತ ಒಕ್ಕಲಿಗರು, ರಾಜಕೀಯ ಪ್ರಜ್ಞೆಯಿರುವ ಒಕ್ಕಲಿಗರನ್ನು ದೇವೇಗೌಡರು ಮುಗಿಸುತ್ತಾರೆ. ಈಗ ಡಿಕೆ ಸಹೋದರರನ್ನು ಮುಗಿಸುವ ಪ್ರಯತ್ನ ಮಾಡ್ತಿದ್ದಾರೆ. ಸಿದ್ದರಾಮಯ್ಯ ಅವರು ಎರಡನೇ ಬಾರಿ ಮುಖ್ಯಮಂತ್ರಿ ಆದ ಅಂತ ದೇವೇಗೌಡರಿಗೆ ಹೊಟ್ಟೆಯುರಿ. ಅದಕ್ಕೇ ನಮ್ಮ ಸರಕಾರ ಕಿತ್ತಾಕುತ್ತೇವೆ ಎನ್ನುತ್ತಿದ್ದಾರೆ.

- ಸಿದ್ದರಾಮಯ್ಯ ಮುಖ್ಯಮಂತ್ರಿ

ಸಿದ್ದರಾಮಯ್ಯ ಅವರನ್ನು ಹಣಕಾಸು ಸಚಿವರನ್ನಾಗಿ ಮಾಡಿದ್ದೇ ಈ ದೇವೇಗೌಡ. ಮತ್ತೆ ಅವರೇನು ಎಂದು ಹೇಳಲು ನಾನು ಹೋಗಲ್ಲ. ನಿಖಿಲ್ ನನ್ನ ಮೊಮ್ಮಗ ಎನ್ನುವ ಮಾತು ಬೇಕಿಲ್ಲ. ನಾಮಪತ್ರ ಸಲ್ಲಿಸುವವರೆಗೂ ನಿಖಿಲ್ ಹೆಸರನ್ನು ನಾನು ಉಲ್ಲೇಖಿಸಲೇ ಇಲ್ಲ. ಮಹಾನುಭಾವ ಎನ್ನುವ ಡಿಕೆಶಿಯ ಸೊಕ್ಕು ಮುರಿಯಲು ನಿಖಿಲ್ ಗೆಲುವು ಅನಿವಾರ್ಯ. ಪುಣ್ಯಾತ್ಮರಾದ ಮತದಾರರ ನಿರ್ಣಯವೇ ಎಲ್ಲದಕ್ಕೂ ಉತ್ತರ.

- ಎಚ್.ಡಿ.ದೇವೇಗೌಡ ಮಾಜಿ ಪ್ರಧಾನಿ

ಈ ಸರಕಾರಕ್ಕೆ ಪ್ರಜಾಪ್ರಭುತ್ವದಲ್ಲಿ ನಂಬಿಕೆ ಇದೆಯೊ ಇಲ್ಲವೋ ಗೊತ್ತಿಲ್ಲ. ಪ್ರಜಾಪ್ರಭುತ್ವ ಮೌಲ್ಯಗಳನ್ನು ಗಾಳಿಗೆ ತೂರಿ, ಸ್ವೇಚ್ಛಾಚಾರದಿಂದ ಎಲ್ಲ ಮಂತ್ರಿಗಳು ಅವರ ಜಾತಿ ಆಧಾರದಲ್ಲಿ ಮತ ಕೇಳುವುದಲ್ಲದೇ ಹಣ ಹಂಚಿಕೆ ಮಾಡುತ್ತಿದ್ದಾರೆ. ಸಿಎಂ ಆದಿಯಾಗಿ ಹಸಿ ಸುಳ್ಳು ಹೇಳುತ್ತಿದ್ದಾರೆ. ಸಿಎಂ ಒಂದು ದಿನವೂ ಈ ಕ್ಷೇತ್ರಕ್ಕೆ ಏನು ಮಾಡಿದ್ದೇನೆ ಎಂದು ಹೇಳಲಿಲ್ಲ . ನಾನೇನು ಮಾಡಿದ್ದೇನೆ ಎನ್ನುವುದಕ್ಕೆ ದಾಖಲೆಯಿದೆ, ಪರಿಶೀಲಿಸಿ.

- ಬಸವರಾಜ ಬೊಮ್ಮಾಯಿ ಮಾಜಿ ಮುಖ್ಯಮಂತ್ರಿ

ಕಾಲಾ ಕುಮಾರಸ್ವಾಮಿ ಹೇಳಿಕೆಗೆ ತೀವ್ರ ಆಕ್ಷೇಪ

ಜಮೀರ್ ಅಹ್ಮದ್‌ಗೆ ಮತ್ತೊಂದು ಸಂಕಷ್ಟ

ಬೆಂಗಳೂರು: ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರನ್ನು 'ಕಾಲಾ(ಕರಿಯ) ಕುಮಾರಸ್ವಾಮಿ' ಎಂದೂ ಹಾಗೂ ಇಡೀ ದೇವೇಗೌಡರ ಕುಟುಂಬವನ್ನೇ ಖರೀದಿ ಮಾಡುತ್ತೇನೆ ಎನ್ನುವ ಸಚಿವ ಜಮೀರ್ ಅಹ್ಮದ್ ಹೇಳಿಕೆ ಇದೀಗ ಭಾರಿ ವಿವಾದಕ್ಕೆ ಕಾರಣವಾಗಿದೆ. ಬಿಜೆಪಿಯ ಕೇಂದ್ರ ನಾಯ ಕರು ಜಮೀರ್ ವಿರುದ್ಧ ಜನಾಂಗೀಯ ನಿಂದನೆಯ ಆರೋಪವನ್ನು ಮಾಡುವ ಮೂಲಕ ರಾಷ್ಟ್ರಮಟ್ಟದಲ್ಲಿ ಸದ್ದಾಗುತ್ತಿದೆ.

ಜಮೀರ್ ಚುನಾವಣಾ ಪ್ರಚಾರದ ವೇಳೆ 'ಬಿಜೆಪಿಯನ್ನು ನಂಬಿದರೂ ಕಾಲಾ ಕುಮಾರಸ್ವಾಮಿಯನ್ನು ನಂಬಬಾರದು' ಎಂದು ಹೇಳಿರುವುದು ಇದೀಗ ವಿವಾದಕ್ಕೆ ಕಾರಣವಾಗಿದೆ. ಆದರೆ ತಮ್ಮ ಹೇಳಿಕೆಯನ್ನು ಸಮರ್ಥಿಸಿಕೊಂಡಿರುವ ಜಮೀರ್ ಅಹ್ಮದ್, ನಾನು ಮೊದಲಿನಿಂದಲೂ ಕುಮಾರಸ್ವಾಮಿ ಅವರನ್ನು ಕರಿಯಣ್ಣ ಎಂದು ಕರೆಯುತ್ತಿದ್ದು, ಅವರು ನನ್ನನ್ನು ಕುಳ್ಳ ಎನ್ನುತ್ತಾರೆ. ಮೊದಲಿನಿಂದಲೂ ಅದೇ ಶಬ್ದದಲ್ಲಿ ಕರೆಯುವುದರಿಂದ ಉರ್ದುವಿನಲ್ಲಿ ಮಾತನಾಡುವಾಗ ಸ್ವಾಭಾವಿಕವಾಗಿ ಆ ಹೇಳಿಕೆ ಬಂದಿದೆ. ಅದಕ್ಕೆ ವಿಶೇಷ ಅರ್ಥ ಕಲ್ಪಿಸುವ ಅಗತ್ಯವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಜಮೀರ್ ತಮ್ಮ ಹೇಳಿಕೆಯನ್ನು ಸಮರ್ಥಿ ಸಿಕೊಂಡರೂ ಬಿಜೆಪಿ ಹಾಗೂ ಜೆಡಿಎಸ್ ನಾಯಕರು ಇದಕ್ಕೆ ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ. ಕೇಂದ್ರ ಸಚಿವರನ್ನು ಈ ರೀತಿ ವರ್ಣನಿಂದಕ ಹಾಗೂ ಜನಾಂಗೀಯ ನಿಂದನೆ ಮಾಡುವುದು ಸರಿಯಲ್ಲ. ಅವರ ವಿರುದ್ಧ ಕೂಡಲೇ ದೂರು ದಾಖಲಿಸಬೇಕು ಎಂದು ಆಗ್ರಹಿಸಿದ್ದಾರೆ.

→ 4

ಕುಮಾರ ಸ್ವಾಮಿ ಅವರನ್ನು ಮೊದಲಿನಿಂದಲೂ 'ಕರಿಯಣ್ಣ' ಅಂತಲೇ ಕರೆಯೋದು. ಅದನ್ನು ಉರ್ದುವಿನಲ್ಲಿ ಹೇಳಿದ್ದೇನೆ. ಮುಂಚೆಯಿಂದಲೂ ಕರೆಯುವುದರಿಂದ ಸ್ವಾಭಾವಿಕವಾಗಿ ಆ ಪದ ಬಂದಿದೆ. ಇನ್ನು ದೇವೇಗೌಡರನ್ನು ಖರೀದಿಸುವ ಅಥವಾ ಒಕ್ಕಲಿಗರನ್ನು ಖರೀದಿಸುತ್ತೇನೆ ಎಂದಿಲ್ಲ. ಆದರೆ ನಮ್ಮ ಸಮಾಜವನ್ನು ಖರೀದಿ ಮಾಡಲು ಆಗಲ್ಲ ಅಂದಿದ್ದೇನೆ.

- ಜಮೀರ್ ಅಹ್ಮದ್ ಸಚಿವ

ಕೇಂದ್ರ ಸಚಿವ ಮತ್ತು ಕರ್ನಾಟಕದ ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿಯವರನ್ನು ಕಾಂಗ್ರೆಸ್‌ನ ಜಮೀರ್ 'ಕಾಲಾ ಕುಮಾರಸ್ವಾಮಿ' ಎಂದಿರುವುದನ್ನು ಖಂಡಿಸುತ್ತೇನೆ. ಇದೊಂದು ಜನಾಂಗೀಯ ನಿಂದನೆ. ಇದೇ ರೀತಿ ದಕ್ಷಿಣ ಭಾರತೀ ಯರು ಆಫ್ರಿಕಾದವರ ರೀತಿ ಕಾಣುತ್ತಾರೆ, ಈಶಾನ್ಯ ಭಾರತೀಯರು ಚೀನಾದವರಂತೆ ಮತ್ತು ಉತ್ತರ ಭಾರತೀಯರು ಅರಬ್ಬಿನವರಂತೆ ಕಾಣುತ್ತಾರೆ ಎಂದು ರಾಹುಲ್ ಗಾಂಧಿ ಸಲಹೆಗಾರರು ಹೇಳಿಕೆ ನೀಡಿದ್ದರು.

- ಕಿರಣ್ ರಿಜೂಜು ಕೇಂದ್ರ ಸಚಿವ

11 ಶಂಕಿತ ಉಗ್ರರ ಹತ್ಯೆ

ಇಂಫಾಲ್: ಮಣಿಪುರದ ಜಿರಿಬಾಮ್ ಜಿಲ್ಲೆಯಲ್ಲಿ ನಡೆದ ಎನ್‌ಕೌಂಟರ್‌ನಲ್ಲಿ 11 ಶಂಕಿತ ಉಗ್ರರನ್ನು ಹತ್ಯೆ ಮಾಡಲಾಗಿದೆ. ಕೇಂದ್ರ ಮೀಸಲು ಪಡೆಗಳು ಮತ್ತು ಉಗ್ರರ ನಡುವೆ ಎನ್‌ಕೌಂಟರ್ ನಡೆದಿದೆ. ಶಂಕಿತ ಉಗ್ರರು ಮೈತೇಯಿ ಸಮುದಾಯದ ಮಹಿಳೆಯೊಬ್ಬರನ್ನು ಹತ್ಯೆ ಮಾಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಕಳೆದ ವರ್ಷ ಮೇ 3ರಂದು ಮಣಿಪುರದಲ್ಲಿ ಕುಕಿ ಮತ್ತು ಮೈತೇಯಿ ಸಮುದಾಯಗಳ ನಡುವೆ ಸಂಘರ್ಷ ಆರಂಭವಾದಾಗಿನಿಂದಲೂ ನೂರಾರು ಮಂದಿಯನ್ನು ಹತ್ಯೆ ಮಾಡಲಾಗಿದೆ.

ಗುಂಡೇಟಿಗೆ ಯುವಕ ಬಲಿ

ಖಾನಾಪುರ: ಖಾನಾಪುರ ತಾಲೂಕಿನ ಐತಿಹಾಸಿಕ ಹಲಸಿ ಗ್ರಾಮ ವ್ಯಾಪ್ತಿಯಲ್ಲಿ ಸೋಮವಾರ ನಸುಕಿನಲ್ಲಿ ಅಪರಿಚಿತರು ಗುಂಡು ಹಾರಿಸಿದ್ದು ಯುವಕ ಮೃತಪಟ್ಟಿದ್ದಾನೆ. ಹಲಸಿ ನಿವಾಸಿ ಅಲ್ತಾಫ್ ಮಕಾನದಾರ (30) ಸಾವಿಗೀಡಾದವರು. ಕಾಡಂಚಿಗೆ ಇರುವ ರಸ್ತೆ ಪಕ್ಕದ ಮರಳು ತೆಗೆಯುವ ಸ್ಥಳದಲ್ಲಿ ಘಟನೆ ನಡೆದಿದೆ. ಗುಂಡು ನೇರವಾಗಿ ಯುವಕನ ಎದೆಭಾಗದ ಕೆಳಗೆ ಬಿದ್ದಿದ್ದರಿಂದ ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ. ಘಟನೆ ಹೇಗೆ ನಡೆಯಿತು ಎಂಬ ಬಗ್ಗೆ ಪೊಲೀಸರಿಗೆ ಸ್ಪಷ್ಟವಾಗಿ ಗೊತ್ತಾಗಿಲ್ಲ.

ಇರಾನ್ ಯೋಧರ ಬಲಿ

ಟೆಹ್ರಾನ್: ಇರಾನ್‌ನೊಂದಿಗಿನ ಪಾಕಿಸ್ತಾನದ ಗಡಿಯಲ್ಲಿ ಉಗ್ರರು ನಡೆಸಿದ ದಾಳಿಯಲ್ಲಿ ಐವರು ಇರಾನಿನ ಯೋಧರು ಸಾವನ್ನಪ್ಪಿದ್ದಾರೆ. ಮೃತರು ಅರೆಸೈನಿಕ ರೆವಲ್ಯೂಷನರಿ ಗಾರ್ಡ್‌ನ ಸ್ವಯಂಸೇವಕ ಬಸಿಜ್ ಪಡೆಯ ಬಲೂಚ್ ಜನಾಂಗೀಯ ಸದಸ್ಯರು ಎಂದು ಗುರುತಿಸಲಾಗಿದೆ. ಈ ದಾಳಿಯ ಹೊಣೆಯನ್ನು ಯಾವುದೇ ಗುಂಪು ತಕ್ಷಣವೇ ಹೊತ್ತುಕೊಂಡಿಲ್ಲ. ಕಳೆದ ತಿಂಗಳು, ಅಪರಿಚಿತ ಬಂದೂಕುಧಾರಿಗಳು ಪ್ರಾಂತ್ಯದ ರೆವಲ್ಯೂಷನರಿ ಗಾರ್ಡ್ ಮುಖ್ಯಸ್ಥ ಸೇರಿದಂತೆ ನಾಲ್ವರನ್ನು ಕೊಂದಿದ್ದರು.

ಫನ್‌ತರಂಗ
- ರಘುಪತಿ ಶೃಂಗೇರಿ -



ನ್ಯಾ.ಮೈಕಲ್ ಡಿ. ಕುನ್ಹಾ ಬಗ್ಗೆ ಆಕ್ಷೇಪಾರ್ಹ ಹೇಳಿಕೆಗೆ ಕಾಂಗ್ರೆಸ್ ಖಂಡನೆ

ಜೋಶಿ ವಿರುದ್ಧ ರಾಜ್ಯಪಾಲರಿಗೆ ದೂರು

ಬೆಂಗಳೂರು: ಕೋವಿಡ್ ಅಕ್ರಮದ ಮಧ್ಯಂತರ ವರದಿ ನೀಡಿದ್ದ ನಿವೃತ್ತ ನ್ಯಾ.ಮೈಕಲ್ ಡಿ. ಕುನ್ಹಾ ಅವರ ವಿರುದ್ಧ ವಿವಾದಾತ್ಮಕ ಹೇಳಿಕೆ ನೀಡಿದ್ದ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಸಚಿವ ದಿನೇಶ್ ಗುಂಡೂರಾವ್ ಹಾಗೂ ಕೃಷ್ಣಬೈರೇಗೌಡ ರಾಜ್ಯಪಾಲರಿಗೆ ದೂರು ಸಲ್ಲಿಸಿದ್ದಾರೆ.

ಕೋವಿಡ್ ಹಗರಣದಲ್ಲಿ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಹಾಗೂ ಶ್ರೀರಾಮುಲು ಅವರ ಹೆಸರು ಉಲ್ಲೇಖವಾಗಿರುವುದಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸುವ ವೇಳೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರು, 'ಕುನ್ಹಾ ಅವರು ಕಾಂಗ್ರೆಸ್ ಏಜೆಂಟ್ ರೀತಿ ವರದಿ ನೀಡಿದ್ದಾರೆ' ಎನ್ನುವ ಹೇಳಿಕೆ ನೀಡಿದ್ದರು. ಈ ಹೇಳಿಕೆ ತೀವ್ರ ವಿವಾದಕ್ಕೆ ಕಾರಣವಾಗಿದೆ.

ಕೇಂದ್ರ ಸಚಿವರಾಗಿ, ಜವಾಬ್ದಾರಿಯುತ ಸ್ಥಾನದಲ್ಲಿರುವ ವರು ನಿವೃತ್ತ ನ್ಯಾಯಮೂರ್ತಿಗಳ ಬಗ್ಗೆ ಈ ರೀತಿ ಹೇಳಿಕೆ ನೀಡುವುದು ಸರಿಯಲ್ಲ. ಇದರಿಂದ ಸಮಾಜಕ್ಕೆ ಕೆಟ್ಟ ಸಂದೇಶ ರವಾನೆಯಾಗುತ್ತದೆ ಎಂದು ಕಾಂಗ್ರೆಸ್ ನಾಯಕರು ಆರೋಪಿಸಿದ್ದಾರೆ. ಇದೇ ವಿಷಯವಾಗಿ ಸೋಮವಾರ ರಾಜಭವನದಲ್ಲಿ ರಾಜ್ಯಪಾಲರ ಥಾವರ್ ಚಂದ್ ಗೆಹ್ಲೋಥ್ ಅವರನ್ನು ಭೇಟಿಯಾದ ಸಚಿವ ಕೃಷ್ಣಬೈರೇಗೌಡ, ದಿನೇಶ್ ಗುಂಡೂರಾವ್ ಅವರು ಪ್ರಲ್ಹಾದ್ ಜೋಶಿ ವಿರುದ್ಧ ಕ್ರಮವಹಿಸುವಂತೆ ಮನವಿ ಮಾಡಿದರು. ನಿವೃತ್ತ ನ್ಯಾಯ ಮೂರ್ತಿಗಳ ವಿರುದ್ಧ ಆಕ್ಷೇಪಾರ್ಹ ಹೇಳಿಕೆ ನೀಡಿರುವ ಪ್ರಲ್ಹಾದ್ ಜೋಶಿ ವಿರುದ್ಧ ಕ್ರಮಕ್ಕೆ ರಾಷ್ಟ್ರಪತಿಗಳಿಗೆ ಶಿಫಾರಸು ಮಾಡಬೇಕು ಎಂದು ಆಗ್ರಹಿಸಿದರು.

ರಾಜಭವನದಲ್ಲಿ ರಾಜ್ಯಪಾಲರ ಥಾವರ್ ಚಂದ್ ಗೆಹ್ಲೋಥ್ ಅವರನ್ನು ಭೇಟಿಯಾದ ಸಚಿವ ಕೃಷ್ಣಬೈರೇಗೌಡ, ದಿನೇಶ್ ಗುಂಡೂರಾವ್ ಅವರು ಪ್ರಲ್ಹಾದ್ ಜೋಶಿ ವಿರುದ್ಧ ಕ್ರಮವಹಿಸುವಂತೆ ಮನವಿ ಮಾಡಿದರು

ಕುನ್ಹಾ ಅವರನ್ನು ಏಜೆಂಟ್ ಎಂದಿಲ್ಲ: ದೂರು ದಾಖಲಾಗುತ್ತಿದ್ದಂತೆ ಈ ಬಗ್ಗೆ ಹಾವೇರಿಯಲ್ಲಿ ಪ್ರತಿಕ್ರಿಯಿಸಿರುವ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರು, ನಾನು ಕುನ್ಹಾ ಅವರಿಗೆ ಏಜೆಂಟ್ ಅಂತ ಹೇಳಿಲ್ಲ. ಏಜೆಂಟರ ರೀತಿ ನಡೆದುಕೊಳ್ಳಬೇಡಿ ಅಂದಿದ್ದೇನೆ. ಅವರ ಮೇಲೆ ನನಗೆ ವೈಯಕ್ತಿಕ ದ್ವೇಷ, ಅಸೂಯೆಯಿಲ್ಲ ಎಂದು ಸ್ಪಷ್ಟಪಡಿಸಿದರು.

ಕಾಂಗ್ರೆಸ್‌ನವರು ತರಾತುರಿಯಲ್ಲಿ ವರದಿ ಕೊಡಿಸಿದ್ದಾರೆ. ಯಡಿಯೂರಪ್ಪ ಅವರಿಗೆ ನೋಟಿಸ್ ಬಂದಿಲ್ಲ, ಪ್ರಕ್ರಿಯೆ ನಡೆದಿಲ್ಲ. ಈ ರೀತಿ ಮಾಡಬೇಡಿ, ಪಾರದರ್ಶನವಾಗಿ ತನಿಖೆ ಮಾಡಿ ಅಂದಿದ್ದೇನೆ. ಕುನ್ಹಾ ಅವರಿಗೆ ಬೇಸರವಾಗಿದ್ದರೆ ಅದಕ್ಕೆ ವಿಷಾದ ವ್ಯಕ್ತಪಡಿಸುತ್ತೇನೆ ಎಂದಿದ್ದಾರೆ.

ಪ್ರಲ್ಹಾದ್ ಜೋಶಿ ನ್ಯಾಯಾಂಗ ತನಿಖಾ ಆಯೋಗದ ಬಗ್ಗೆ ಹಾಗೂ ನಿವೃತ್ತ ನ್ಯಾಯಮೂರ್ತಿಯವರ ಬಗ್ಗೆ ನಿಂದಿಸಿ ಕೆಟ್ಟದಾಗಿ ಮಾತನಾಡಿದ್ದಾರೆ. ಇದು ಅಹಂಕಾರದ ಪರಮಾವಧಿ. ಜೋಶಿ ಸಾಮಾನ್ಯ ವ್ಯಕ್ತಿಯಲ್ಲ, ಅವರೊಬ್ಬ ಕೇಂದ್ರ ಸಚಿವರು. ಸಂವಿಧಾನದಲ್ಲಿ ಸ್ವಾಯತ್ತ ಸಂಸ್ಥೆಗಳು, ಆಯೋಗಗಳ ಬಗ್ಗೆ ವೈಯುಕ್ತಿಕ ಟೀಕೆ ಸರಿಯಲ್ಲ. ಇದು ಪ್ರಜಾಪ್ರಭುತ್ವ ಮೌಲ್ಯಗಳಿಗೆ ವಿರುದ್ಧವಾಗಿದೆ. ಕಾನೂನು ಬಾಹಿರವಾಗಿದೆ.

- ದಿನೇಶ್ ಗುಂಡೂರಾವ್ ಆರೋಗ್ಯ ಸಚಿವ

ಗೋಯಲ್‌ಗೆ ಕಾಯಂ ಜಾಮೀನು

ಮುಂಬೈ: ಅಕ್ರಮ ಹಣ ವರ್ಗಾವಣೆ ಪ್ರಕರಣದ ಆರೋಪಿ, ಜೆಟ್ ಏರ್‌ವೇಸ್ ಸಂಸ್ಥಾಪಕ ನರೇಶ್ ಗೋಯಲ್ ಅವರಿಗೆ ಬಾಂಬೆ ಹೈಕೋರ್ಟ್ ಸೋಮವಾರ ಕಾಯಂ ಜಾಮೀನು ಮಂಜೂರು ಮಾಡಿದೆ. ಈ ವರ್ಷದ ಮೇನಲ್ಲಿ ನ್ಯಾ. ಎನ್.ಜೆ.ಜಮಾದಾರ್ ಅವರ ಏಕ ಸದಸ್ಯ ಪೀಠ ವೈದ್ಯಕೀಯ ಕಾರಣಗಳಿಗಾಗಿ ಗೋಯಲ್ ಅವರಿಗೆ ಮಧ್ಯಂತರ ಜಾಮೀನು ನೀಡಿತ್ತು. ನ್ಯಾ. ಜಮಾದಾರ್ ಅವರು ಸೋಮವಾರ ಮಧ್ಯಂತರ ಆದೇಶವನ್ನು ಕಾಯಂಗೊಳಿಸಿದ್ದಾರೆ. ಗೋಯಲ್ (75) ಅವರು ಕ್ಯಾನ್ಸರ್‌ನಿಂದ ಬಳಲುತ್ತಿದ್ದು, ಚಿಕಿತ್ಸೆ ಪಡೆಯಲು ಜಾಮೀನು ಕೋರಿದ್ದರು.

ಮಗು ಸಾವು: ಬಾಣಂತಿ ಆತ್ಮಹತ್ಯೆ

ಮಂಗಳೂರು: ನಗರದ ಲೇಡಿಗೋಷನ್ ಹೆರಿಗೆ ಆಸ್ಪತ್ರೆಯ ನಾಲ್ಕನೇ ಮಹಡಿಯಿಂದ ಜಿಗಿದು ಬಾಣಂತಿಯೊಬ್ಬರು ಸೋಮವಾರ ಆತ್ಮಹತ್ಯೆಮಾಡಿಕೊಂಡಿದ್ದಾರೆ. ಉಡುಪಿ ಜಿಲ್ಲೆಯ ಕಾರ್ಕಳದ ರಂಜಿತಾ ಆಚಾರ್ಯ (28) ಮೃತರು. ರಂಜಿತಾ ಅವರಿಗೆ ಅವಧಿ ಪೂರ್ವ ಪ್ರಸವವಾಗಿತ್ತು. ಅ.30ರಂದು ಸಿಸೇರಿಯನ್ ಮೂಲಕ ಹೆರಿಗೆ ನಡೆದಿತ್ತು. ಐಸಿಯುವಿನಲ್ಲಿ ಆರೈಕೆಯಲ್ಲಿದ್ದ ಶಿಶು ನ.3ರಂದು ಮೃತಪಟ್ಟಿತ್ತು. ಅದರಿಂದ ಮನನೊಂದು ಆತ್ಮಹತ್ಯೆಗೆ ಶರಣಾಗಿದ್ದಾರೆ ಎಂದು ತಿಳಿದುಬಂದಿದೆ.

ಸುಪ್ರೀಂಕೋರ್ಟ್‌ನಲ್ಲೂ ಪ್ರಜ್ವಲ್ ರೇವಣ್ಣ ಜಾಮೀನು ಅರ್ಜಿ ವಜಾ

ದೆಹಲಿ: ಮಹಿಳೆಯ ಮೇಲೆ ಅತ್ಯಾಚಾರ ಎಸಗಿದ ಪ್ರಕರಣದಲ್ಲಿ ಜಾಮೀನು ನಿರಾಕರಿಸಿರುವ ಹೈಕೋರ್ಟ್ ಆದೇಶ ಪ್ರಶ್ನಿಸಿ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಸಲ್ಲಿಸಿರುವ ವಿಶೇಷ ಮೇಲ್ಮನವಿಯನ್ನು ಸುಪ್ರೀಂ ಕೋರ್ಟ್ ವಜಾಗೊಳಿಸಿದೆ.

ನ್ಯಾಯಮೂರ್ತಿಗಳಾದ ಬೇಲಾ ಎಂ. ತ್ರಿವೇದಿ ಮತ್ತು ಸತೀಶ್ ಚಂದ್ರ ಶರ್ಮಾ ಪೀಠವು ಅರ್ಜಿಯನ್ನು ತಿರಸ್ಕರಿಸಿತು ಮತ್ತು ಪ್ರಜ್ವಲ್ ಅತ್ಯಂತ ಪ್ರಭಾವಶಾಲಿ ವ್ಯಕ್ತಿ ಎಂಬುದನ್ನು ಗಣನೆಗೆ ತೆಗೆದುಕೊಂಡಿತು. ಪ್ರಜ್ವಲ್ ವಿರುದ್ಧದ ಆರೋಪಗಳು ಗಂಭೀರವಾದವು. ಹೀಗಾಗಿ, ಜಾಮೀನು ನಿರಾಕರಿಸಿ ಕರ್ನಾಟಕ ಹೈಕೋರ್ಟ್ ಅ.21ರಂದು ನೀಡಿರುವ ತೀರ್ಪಿನಲ್ಲಿ ಮಧ್ಯಪ್ರವೇಶಿಸಲು ಸಾಧ್ಯವಿಲ್ಲ ಎಂದಿತು.

ಆರೋಪಿ ಪರ ವಾದ ಮಂಡಿಸಿದ ಹಿರಿಯ ವಕೀಲ ಮುಕುಲ್ ರೋಹಟಗಿ, ಆರಂಭಿಕ ದೂರಿನಲ್ಲಿ ಐಪಿಸಿ ಸೆಕ್ಷನ್ 376 (ಅತ್ಯಾಚಾರ) ಬಗ್ಗೆ ನಿರ್ದಿಷ್ಟವಾಗಿ ಹೇಳಿರಲಿಲ್ಲ ಎಂದು ಗಮನ ಸೆಳೆದರು. ಕಕ್ಷಿದಾರರ ವಿರುದ್ಧ ದೂರು ಸಲ್ಲಿಕೆಯಾಗಿದ್ದು ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ. ಆಗ ಅವರು ವಿದೇಶದಲ್ಲಿದ್ದರು. ಬಳಿಕ ಪೊಲೀಸರಿಗೆ ಶರಣಾದರು. ಸಂಸದರಾಗಿದ್ದ ಅವರು ಲೋಕಸಭಾ ಚುನಾವಣೆಯಲ್ಲಿ ಸೋತಿದ್ದಾರೆ ಎಂದು ಅವರು ಪೀಠದ ಗಮನಕ್ಕೆ ತಂದರು. ಆರು ತಿಂಗಳ ನಂತರ ಅರ್ಜಿಯನ್ನು ನವೀಕರಿಸಲು ಅರ್ಜಿದಾರರಿಗೆ ಅವಕಾಶ ನೀಡುವಂತೆ ವಕೀಲರು ನ್ಯಾಯಾಲಯವನ್ನು ಕೋರಿದರು. 'ನಾವು ಏನನ್ನೂ ಹೇಳುವುದಿಲ್ಲ' ಎಂದು ಪೀಠ ಹೇಳಿತು.

ನಟ ವಿಜಯ್ ಜೈಲಿಂದ ಬಿಡಿಸಿದ್ದ ಆರೋಪಿಯಿಂದ ಜೋಡಿ ಕೊಲೆ

ಬೆಂಗಳೂರು: ನಗರದ ಹೊರವಲಯದಲ್ಲಿ ನಡೆದಿದ್ದ ಜೋಡಿ ಕೊಲೆ ಪ್ರಕರಣಕ್ಕೆ ತಿರುವು ಸಿಕ್ಕಿದೆ. ಡಬಲ್ ಮರ್ಡರ್ ಮಾಡಿರುವ ಆರೋಪಿಯನ್ನು ಈ ಹಿಂದೆ ಪ್ರಕರಣ ವೊಂದರಲ್ಲಿ ಸ್ಯಾಂಡಲ್‌ವುಡ್ ನಟ ದುನಿಯಾ ವಿಜಯ್ ಜೈಲಿಂದ ಬಿಡಿಸಿ ದ್ದರು ಎಂಬ ಮಾಹಿತಿ ಹೊರಬಿದ್ದಿದೆ. ಆದರೆ, ದುನಿಯಾ ವಿಜಿ ಅವರ ಆಶಯವನ್ನು ಕೊಲೆ ಪಾತಕಿ ವ್ಯರ್ಥ ಮಾಡಿದ್ದಾನೆ.

ಬಾಗಲೂರು ಡಬಲ್ ಮರ್ಡರ್ ಆರೋಪಿ ಸುರೇಶ್‌ಗೆ ಈ ಹಿಂದೆ ಪ್ರಕರಣವೊಂದರಲ್ಲಿ ಶ್ಯೂರಿಟಿ ಹಣ ನೀಡಿ ದುನಿಯಾ ವಿಜಯ್ ಬಿಡಿಸಿದ್ದರು. ಈ ಹಿಂದೆ ಡಬಲ್ ಮರ್ಡರ್ ಪ್ರಕರಣ ಹಾಗೂ ಅತ್ಯಾಚಾರ ಪ್ರಕರಣದಲ್ಲಿ ಆರೋಪಿ ಸುರೇಶ್ ಜೈಲು ಸೇರಿದ್ದ. ಅಪರಾಧಿಗಳಿಗೆ ತಲಾ ಮೂರು ಲಕ್ಷದಂತೆ ಶ್ಯೂರಿಟಿ ಹಣವನ್ನು ನಟ ವಿಜಯ್ ಕಟ್ಟಿದ್ದರು. ಈ ವೇಳೆ ಸುರೇಶ್‌ಗೂ ಮೂರು ಲಕ್ಷ ಶ್ಯೂರಿಟಿ ಹಣ ನೀಡಿ ಜೈಲಿಂದ ಬಿಡುಗಡೆಗೊಳಿಸಿದ್ದರು.

ಪುಟಿನ್‌ಗೆ ಟ್ರಂಪ್ ಕರೆ: ಯುದ್ಧ ವಿರಾಮಕ್ಕೆ ಸಲಹೆ

ವಾಷಿಂಗ್ಟನ್: ಅಮೆರಿಕ ಅಧ್ಯಕ್ಷರಾಗಿ ಚುನಾಯಿತರಾದ ಡೊನಾಲ್ಡ್ ಟ್ರಂಪ್, ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರೊಂದಿಗೆ ದೂರವಾಣಿಯಲ್ಲಿ ಮಾತನಾಡಿದ್ದಾರೆ. ಉಕ್ರೇನ್‌ನಲ್ಲಿ ಯುದ್ಧವನ್ನು ಕೊನೆಗೊಳಿಸುವ ಕುರಿತು ಮತ್ತು ಹಲವು ಪ್ರಮುಖ ವಿಷಯಗಳ ಬಗ್ಗೆ ಚರ್ಚಿಸಿದ್ದಾರೆ. ಯುರೋಪ್‌ನಲ್ಲಿ ಶಾಂತಿ ಸ್ಥಾಪನೆ, ಉಕ್ರೇನ್ ಯುದ್ಧ ಅಂತ್ಯಕ್ಕೆ ತಂತ್ರಗಳು ಸೇರಿದಂತೆ ಹಲವು ವಿಚಾರಗಳ ಬಗ್ಗೆ ಚರ್ಚೆ ನಡೆದಿದೆ. ಉಕ್ರೇನ್‌ನಲ್ಲಿ ಯುದ್ಧವನ್ನು ಹೆಚ್ಚಿಸದಂತೆಯೂ ಪುಟಿನ್‌ಗೆ ಟ್ರಂಪ್ ಸಲಹೆ ನೀಡಿದ್ದಾರೆ ಎನ್ನಲಾಗಿದೆ.

ಪಟಾಕಿ ನಿಷೇಧ: ದೆಹಲಿ ಪೊಲೀಸರಿಗೆ ಸುಪ್ರೀಂ ತರಾಟೆ

ದೆಹಲಿ: ದೆಹಲಿಯಲ್ಲಿ ಪಟಾಕಿ ನಿಷೇಧವನ್ನು ಜಾರಿಗೊಳಿಸಲು ವಿಫಲರಾಗಿರುವ ಪೊಲೀಸರನ್ನು ಸುಪ್ರೀಂಕೋರ್ಟ್ ತರಾಟೆಗೆ ತೆಗೆದುಕೊಂಡಿದೆ. ತಕ್ಷಣವೇ ಪಟಾಕಿ ನಿಷೇಧ ಆದೇಶದ ಬಗ್ಗೆ ಸಂಬಂಧಿಸಿದ ಎಲ್ಲ ಪಟಾಕಿ ತಯಾರಕರಿಗೆ ತಿಳಿಸಲು ಮತ್ತು ಪಟಾಕಿಗಳ ಮಾರಾಟ ಹಾಗೂ ತಯಾರಿಕೆಯನ್ನು ಖಚಿತಪಡಿಸಿಕೊಳ್ಳುವಂತೆ ದೆಹಲಿ ಪೊಲೀಸ್ ಕಮಿಷನರ್‌ಗೆ ನಿರ್ದೇಶಿಸಿದೆ. ನ.25ರೊಳಗೆ ಪಟಾಕಿ ತಯಾರಕೆದಾರರೊಂದಿಗೆ ಚರ್ಚೆ ನಡೆಸಿ ಶಾಶ್ವತ ಪಟಾಕಿ ನಿಷೇಧದ ಬಗ್ಗೆ ನಿರ್ಧರಿಸುವಂತೆ ದೆಹಲಿ ಸರಕಾರಕ್ಕೂ ತಾಕೀತು ಮಾಡಿದೆ.

ಕಾಡಾನೆಗಳ ಹಾವಳಿ; ನಿಷೇಧಾಜ್ಞೆ ಜಾರಿ

ಚಿಕ್ಕಮಗಳೂರು: ಮಲೆನಾಡಿನ ಕೆಲವು ಗ್ರಾಮಗಳಲ್ಲಿ ಕಾಡಾನೆಗಳ ಉಪಟಳ ಹೆಚ್ಚಾಗಿರುವ ಹಿನ್ನೆಲೆ ಮುನ್ನೆಚ್ಚರಿಕಾ ಕ್ರಮವಾಗಿ 11 ಗ್ರಾಮಗಳಲ್ಲಿ ನಿಷೇಧಾಜ್ಞೆ ಜಾರಿ ಮಾಡಲಾಗಿದೆ. ಮೂಗ್ತಿಹಳ್ಳಿ ಮತ್ತು ವಸ್ತಾರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಾದ ಮತ್ತಾವರ, ದಂಬದಹಳ್ಳಿ, ಶಿರಗುಂದ, ದುಂಗೆರೆ, ಮೂಗ್ತಿಹಳ್ಳಿ, ಕದ್ರಿಮಿದ್ರಿ, ಆಲದಗುಡ್ಡೆ, ನಂದಿಕೆರೆ, ದಹುಲುವಾಲೆ, ತೊಂಡವಳಿ, ಸಂಸೆ, ದಿಣ್ಣೆಕರೆ, ಗ್ರಾಮಗಳಲ್ಲಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಈ ಗ್ರಾಮಗಳಲ್ಲಿ ಶಾಲಾ, ಕಾಲೇಜುಗಳಿಗೆ ರಜೆ ಘೋಷಣೆ ಮಾಡಲಾಗಿದೆ.

ಸನಾತನ ಹಿಂದೂ ಮಂಡಳಿ ರಚನೆ ಮಾಡಲು ಕೇಂದ್ರಕ್ಕೆ ಶಿಫಾರಸ್ಸು ಪತ್ರ ಬರೆಯಲು ಒತ್ತಾಯ

ವಕ್ಫ್ ಬೋರ್ಡ್ ವಿರುದ್ಧ ಮಠಾಧೀಶರ ಆಕ್ರೋಶ

ಕಲಬುರಗಿ: ನೂರಾರು ವರ್ಷಗಳಿಂದ ಉಳುಮೆ ಮಾಡುತ್ತಿರುವ ರೈತರ ಜಮೀನು, ಮಠ, ಮಂದಿರಗಳ ಆಸ್ತಿಗಳ ಮೇಲೆ ವಕ್ಫ್ ಬೋರ್ಡ್ ಹೆಸರನ್ನು ಬದಲಾವಣೆ ಮಾಡುತ್ತಿರುವುದನ್ನು ತಡೆಹಿಡಿದು, ಕೂಡಲೇ ವಕ್ಫ್ ಆಸ್ತಿ ರಾಷ್ಟ್ರೀಕರಣಗೊಳಿಸಬೇಕು ಎಂದು ಆಗ್ರಹಿಸಿ ಹಿಂದೂ ನಾಗರಿಕ ವೇದಿಕೆ ನೇತೃತ್ವದಲ್ಲಿ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು.

ಸೋಮವಾರ ನಗರದ ಸರ್ದಾರ್ ವಲ್ಲಭ ಭಾಯಿ ಪಟೇಲ್ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿವರೆಗೂ ಹತ್ತಾರು ಮಠಾಧೀಶರು ಹಾಗೂ ನೂರಾರು ಹಿಂದೂ ನಾಗರಿಕ ವೇದಿಕೆಯ ಕಾರ್ಯಕರ್ತರು ವಕ್ಫ್ ಬೋರ್ಡ್ ಹಾಗೂ ಸಚಿವ ಜಮೀರ್ ಅಹ್ಮದ್ ಖಾನ್ ವಿರುದ್ಧ ಘೋಷಣೆ ಕೂಗುತ್ತಾ ಆಕ್ರೋಶ ಹೊರಹಾಕಿ ಜಿಲ್ಲಾಧಿಕಾರಿಗಳ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು.

ವಕ್ಫ್ ಬೋರ್ಡ್‌ನ ಆಸ್ತಿ ರಾಷ್ಟ್ರೀಕರಣಗೊಳಿಸದಿದ್ದರೆ, ಬೋರ್ಡ್ ಅನ್ನು ತಕ್ಷಣವೇ ರದ್ದು ಮಾಡಬೇಕು. ಒಂದು ವೇಳೆ ಬೋರ್ಡ್ ರದ್ದಾಗದಿದ್ದರೆ, ಹಿಂದುಗಳಿಗೂ ಸನಾತನ ಹಿಂದೂ ಮಂಡಳಿ ರಚನೆ ಮಾಡಲು ರಾಜ್ಯ ಸರಕಾರ ಕೇಂದ್ರ ಸರಕಾರಕ್ಕೆ ಶಿಫಾರಸ್ಸು ಪತ್ರ ಬರೆಯಬೇಕು ಎಂದು ಒತ್ತಾಯಿಸಿದರು.

ವಕ್ಫ ಆಸ್ತಿ ರಾಷ್ಟ್ರೀಕರಣಗೊಳಿಸಬೇಕು ಎಂದು ಹಿಂದೂ ನಾಗರಿಕ ವೇದಿಕೆ ನೇತೃತ್ವದಲ್ಲಿ ವಿವಿಧ ಮಠಾಧೀಶರು ಆಗ್ರಹಿಸಿದರು.

→ 4

ಸ್ವಾಮೀಜಿ ವಿರುದ್ಧ ಎಫ್‌ಐಆರ್

ಅಫಜಲಪುರ: ವಕ್ಫ್ ಬೋರ್ಡ್ ವಿರುದ್ಧ ಪ್ರತಿಭಟನೆ ನಡೆಸುವ ವೇಳೆ 'ಎಲ್ಲ ಯುವಕರ ಮನೆಯಲ್ಲಿ ತಲ್ವಾರ್ ಇವೆ, ಯಾರು ಬರುತ್ತಾರೆ ಅವರನ್ನು ಕಡಿಯುತ್ತೇವೆ ಎಂದು ಕೆಲವರು ಹೇಳುತ್ತಿದ್ದಾರೆ. ಹಾಗಾಗಿ ಇನ್ಮುಂದೆ ಮಕ್ಕಳ ಕೈಯಲ್ಲಿ ಪೆನ್ ಕೊಡುವ ಬದಲು ತಲ್ವಾರ್ ಕೊಡಬೇಕಾ ಗುತ್ತದೆ' ಎಂದು ಹೇಳಿರುವ ಮಾಶಾಳದ ಶ್ರೀ ಮರುಳಾರಾಧ್ಯ ಸ್ವಾಮೀಜಿ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

ಸಮಾಚಾರ ಸಣ್ಣದಲ್ಲ

ಸಂಘದ ಅಧ್ಯಕ್ಷರಾಗಿ ರಮೇಶ್ ಆಯ್ಕೆ

ತಿಪಟೂರು: ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘ ತಿಪಟೂರು ಶಾಖೆಗೆ ರಮೇಶ್.ಎಚ್.ಈ. ಮೂರನೇ

ಬಾರಿ ತಾಲೂಕು ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದು ಅಧಿಕಾರದ ಚುಕ್ಕಾಣಿ ಹಿಡಿದಿದ್ದಾರೆ. ತಾಲೂಕಿನ ಎಲ್ಲಾ ಇಲಾಖೆಯ ಸರಕಾರಿ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ನೂತನ ಅಧ್ಯಕ್ಷರಿಗೆ ಅಭಿನಂದಿಸಿದ್ದಾರೆ.

ಯುವತಿ ಕಾಣೆ: ದೂರು ದಾಖಲು

ಚಿಕ್ಕಬಳ್ಳಾಪುರ: ಚಿಕ್ಕಬಳ್ಳಾಪುರ ಮಹಿಳಾ ಪೊಲೀಸ್ ಠಾಣೆ ವ್ಯಾಪ್ತಿಯ ಕುಪ್ಪಹಳ್ಳಿ ಗ್ರಾಮದ ನಿವಾಸಿ 19 ವರ್ಷದ ಕು. ಮೇಘನ ಕೆ.ಆರ್ ರವರು ಪ್ರಥಮ ವರ್ಷದ ಬಿ.ಇ ವಿದ್ಯಾಭ್ಯಾಸ ಮಾಡುತ್ತಿದ್ದು, ಪ್ರತಿದಿನ ಕಾಲೇಜಿಗೆ ಹೋಗಿರುತ್ತಿದ್ದು, ನವೆಂಬರ್ 8 ರಂದು ಎಂದಿನಂತೆ ಕಾಲೇಜಿಗೆ ಹೋದವರು ಮನೆಗೆ ಬಂದಿರುವುದಿಲ್ಲ. ಸ್ನೇಹಿತರ, ಸಂಬಂಧಿಕರ ಮನೆಗಳಲ್ಲಿ ಹಾಗೂ ಸುತ್ತ ಮುತ್ತ ಹುಡಿಕಿದರೂ ಪತ್ತೆಯಾಗದ ಕಾರಣ ತಂದೆಯಾದ ರಮೇಶ್ ರವರು ನನ್ನ ಮಗಳಾದ ಮೇಘನ ಕೆ.ಆರ್ ರವರನ್ನು ಪತ್ತೆ ಮಾಡಿಕೊಡುವಂತೆ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದಾರೆ. ಚಹರೆ: ಕೆ.ಆರ್ ಮೇಘನ, 19 ವರ್ಷ, ಕೋಲು ಮುಖ, ಗೋಧಿ ಮೈಗೆಂಪು ಬಣ್ಣ, ಸಾಧಾರಣ ಮೈಕಟ್ಟು, 4.5 ಅಡಿ ಎತ್ತರ, ಕಪ್ಪು ಮತ್ತು ಕೆಂಪು ಬಣ್ಣ ಮಿಶ್ರಿತ ಚೂಡಿದಾರ್ ಧರಿಸಿದ್ದು, ಕನ್ನಡ ಮತ್ತು ತೆಲುಗು ಮಾತನಾಡುತ್ತಾರೆ. ಈ ಯುವತಿಯ ಬಗ್ಗೆ ಸುಳಿವು ಸಿಕ್ಕಿದರೆ ಹತ್ತಿರ ಪೊಲೀಸ್ ಠಾಣೆ ಹಾಗೂ ಚಿಕ್ಕಬಳ್ಳಾಪುರ ಮಹಿಳಾ ಪೊಲೀಸ್ ಠಾಣೆಯನ್ನು ಸಂಪರ್ಕಿಸಬಹುದೆಂದು ಪೊಲೀಸ್ ಸಬ್ ಇನ್ಸ್ಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಏಕಾದಶಿ ಸಹಸ್ರ ದೀಪೋತ್ಸವ ಸೇವೆ

ತುಮಕೂರು: ಕುಣಿಗಲ್ ತಾಲ್ಲೂಕು ಕಗ್ಗೆರೆ ತೋಂಟದ ಶ್ರೀಸಿದ್ದಲಿಂಗೇಶ್ವರಸ್ವಾಮಿ ತಪೋಕ್ಷೇತ್ರದಲ್ಲಿ ನವೆಂಬರ್ 15ರಂದು ಸಂಜೆ 5.30 ಗಂಟೆಗೆ ಶ್ರೀತೋಂಟದ ಶ್ರೀಸಿದ್ದಲಿಂಗೇಶ್ವರಸ್ವಾಮಿಗೆ ಏಕಾದಶ ಸಹಸ್ರ ದೀಪೋತ್ಸವ ಸೇವೆ ಹಾಗೂ ರಾತ್ರಿ ಮುತ್ತಿನ ಪಲ್ಲಕ್ಕಿ ಉತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಎಡೆಯೂರು ಶ್ರೀಸಿದ್ದಲಿಂಗೇಶ್ವರ ಸ್ವಾಮಿ ಕ್ಷೇತ್ರದ ಕಾರ್ಯನಿರ್ವಹಣಾಧಿಕಾರಿ ತಿಳಿಸಿದ್ದಾರೆ.
ಏಕಾದಶ ಸಹಸ್ರ ದೀಪೋತ್ಸವದ ಒಂದು ದೀಪಕ್ಕೆ 40 ರೂ.ಗಳನ್ನು ನಿಗಧಿಪಡಿಸಲಾಗಿದೆ. ಭಕ್ತಾಧಿಗಳು ಪುದುವಟ್ ಸೇವಾ ಠೇವಣಿಯಲ್ಲಿ 500 ರೂ.ಗಳನ್ನು ತೊಡಗಿಸಿದಲ್ಲಿ ಪ್ರತಿ ವರ್ಷ ಕಾರ್ತಿಕ ಮಾಸದ ಹುಣ್ಣಿಮೆ ದಿವಸ ಏಕಾದಶ ಸಹಸ್ರ ದೀಪೋತ್ಸವದಂದು ಒಂದು ದೀಪವನ್ನು ಹಚ್ಚಿಸುವ ಸೇವಾ ಅವಕಾಶವಿದೆ ಎಂದು ಅವರು ತಿಳಿಸಿದ್ದಾರೆ.

ಶಿಶುವಿನ ಪೋಷಕರ ಪತ್ತೆಗಾಗಿ ಮನವಿ

ತುಮಕೂರು: ತುಮಕೂರು ತಾಲ್ಲೂಕು ಹೆಬ್ಬೂರು ಪೊಲೀಸ್ ಠಾಣೆ ವ್ಯಾಪ್ತಿ ಚನಗಪ್ಪನಪಾಳ್ಯ ಬಾರೆ ಹತ್ತಿರ ಅಕ್ಟೋಬರ್ 19ರಂದು ಮಧ್ಯಾಹ್ನ 12.30ರ ಸಮಯದಲ್ಲಿ ನವಜಾತ ಶಿಶುವೊಂದು ದೊರೆತಿದ್ದು, ಪೋಷಕರು ಯಾರೆಂದು ತಿಳಿದು ಬಂದಿರುವುದಿಲ್ಲ. ನವಜಾತ ಶಿಶುವು ಸಾಧಾರಣ ಮೈಕಟ್ಟು, ಕಂದು ಮೈಬಣ್ಣ, ದುಂಡು ಮುಖ ಹೊಂದಿದ್ದು, ಪೋಷಕರ ಬಗ್ಗೆ ಮಾಹಿತಿ ಲಭ್ಯವಾದಲ್ಲಿ ದೂ.ವಾ. ಸಂ.9480802953, 9110857472, 0816-2241036/ 2956699ನ್ನು ಅಥವಾ ಜಿಲ್ಲಾ ಮಕ್ಕಳ ರಕ್ಷಣಾ ಘಟಕವನ್ನು ಸಂಪರ್ಕಿಸಬೇಕೆಂದು ಪೊಲೀಸ್ ಸಬ್ ಇನ್ಸ್ಪೆಕ್ಟರ್ ಮನವಿ ಮಾಡಿದ್ದಾರೆ.

ಇ-ಸ್ವತ್ತು ಮಾಡಿಕೊಡಲು ಅಧಿಕಾರಿಗಳಿಗೆ ಸೂಚನೆ

ತುಮಕೂರು: ಕಾವೇರಿ 2.0 ತಂತ್ರಾಂಶ ಜತಗೆ ಇ-ಆಸ್ತಿ ಮತ್ತು ಯು.ಎಲ್.ಎಂ.ಎಸ್. ತಂತ್ರಾಂಶ ಲಿಂಕ್ ಮಾಡಲಾದ ಕಾರಣ ಯಾವುದೇ ಸ್ವತ್ತುಗಳ ನೊಂದಣಿ, ಅಡಮಾನ, ಒಳಗೊಂಡಂತೆ ಯಾವುದೇ ವಹಿವಾಟು ನಡೆಸಲು ಇ-ಸ್ವತ್ತು ಖಾತೆ ಬೇಕಾಗಿದ್ದು, ಸಾರ್ವಜನಿಕರು ಇ-ಸ್ವತ್ತಿಗಾಗಿ ಪರದಾಡುತ್ತಿರುವ ಬಗ್ಗೆ ನನ್ನ ಗಮನಕ್ಕೆ ಬಂದಿದ್ದು, ಸಾರ್ವಜನಕರಿಗೆ ಅನುಕೂಲ ಮಾಡುವ ದೃಷ್ಟಿಯಿಂದ ತುಮಕೂರು ಮಹಾನಗರಪಾಲಿಕೆಯು ಇ-ಸ್ವತ್ತು ಮಾಡಿಕೊಡಲು ಅರ್ಜಿ ತೆಗೆದುಕೊಳ್ಳುವ ಕೌಂಟರ್‌ಗಳನ್ನು ಹೆಚ್ಚುವರಿಯಾಗಿ ತೆಗೆಯುವುದು. ಮುನ್ಸಿಪಲ್ ಖಾತೆಗಳ ಎಂ.ಎ.ಆರ್-19 ಕೊಡಲು ಪ್ರತ್ಯೇಕ ಕೌಂಟರ್, ಸ್ವತ್ತಿನ ದಾಖಲೆಗಳನ್ನು ಸ್ಕ್ಯಾನಿಂಗ್ ಮಾಡಲು ಹೆಚ್ಚುವರಿ ಉಪಕರಣಗಳನ್ನು ಸಿಬ್ಬಂದಿಗೆ ನೀಡಬೇಕು. ಇ-ಸ್ವತ್ತು ಮಾಡಿಕೊಡಲೆಂದೇ ಪಾಲಿಕೆಯ ಹೆಚ್ಚುವರಿ ಸಿಬ್ಬಂದಿಯನ್ನು ನೇಮಿಸಬೇಕು. ಸಾರ್ವಜನಿಕರು ಹಲವಾರು ಸವಾಲುಗಳನ್ನು ಎದುರಿಸುತ್ತಿರುವುದು ನನ್ನ ಗಮನಕ್ಕೆ ಬಂದಿದೆ ಎಂದರು.

{ಬಿ.ಎಸ್.ಯಡಿಯೂರಪ್ಪ } ಮಾಜಿ ಸಿಎಂ

ಕರ್ನಾಟಕದಲ್ಲಿ ಭ್ರಷ್ಟಾಚಾರ ತಂಡವಾಡುತ್ತಿದೆ. ಭಾಗ್ಯಲಕ್ಷ್ಮಿ ಯೋಜನೆ ನಿಲ್ಲಿಸಿದ್ದಾರೆ. ಅನೇಕ ಜನಪರ ಯೋಜನೆಯನ್ನು ನಿಲ್ಲಿಸಿದ್ದಾರೆ. ಅವರಿಗೆ ಹಣ ಕೊಡುವ ಯೋಗ್ಯತೆ ಇಲ್ಲ ಈ ಸರಕಾರ ದಿವಾಳಿ ಆಗಿದೆ. ಮುಂದಿನ ದಿನಗಳು ಒಳ್ಳೆಯದಿದೆ. ನಿಖಿಲ್ ಅವರ ಗೆಲುವಿಗೆ ಮನೆ ಮನೆಗೆ ಹೋಗಿ ಪ್ರಚಾರ ಮಾಡಿ.

ಸಮಾಜ ಸುಧಾರಣೆಯಲ್ಲಿ ಶ್ರೀಗಳ ಪಾತ್ರ ಅನನ್ಯ

ಧರ್ಮಸಭಾ ಕಾರ್ಯಕ್ರಮ ಉದ್ಘಾಟನೆ | ಹಿರೇಮಠದ ಡಾ.ಶಿವಾನಂದ ಶಿವಾಚಾರ್ಯ ಸ್ವಾಮೀಜಿ

ತುಮಕೂರು: ನಾವು ಧಾರ್ಮಿಕ ಸಂಕಷ್ಟ ಕಾಲದಲ್ಲಿದ್ದೇವೆ. ಸಮಾಜವನ್ನು ಸರಿಯಾದ ದಿಕ್ಕಿನಲ್ಲಿ ನಡೆಸಿಕೊಂಡು ಹೋಗುವ ನಿಟ್ಟಿನಲ್ಲಿ ಸ್ವಾಮೀಜಿಗಳ ಪಾತ್ರ ಪ್ರಮುಖವಾಗಿದೆ ಎಂದು ಹಿರೇಮಠದ ಡಾ.ಶಿವಾನಂದ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ತಾಲೂಕಿನ ಚಿಕ್ಕತೊಟ್ಲುಕೆರೆಯ ಅಟವಿ ಜಂಗಮ ಸುಕ್ಷೇತ್ರದಲ್ಲಿ ಅಟವಿ ಮಹಾಸ್ವಾಮಿಗಳ 124ನೇ ಪುಣ್ಯಸ್ಮರಣೋತ್ಸವ, ಮಠಾಧ್ಯಕ್ಷರಾದ ಅಟವೀ ಶಿವಲಿಂಗ ಸ್ವಾಮೀಜಿಗಳ ಪೀಠಾರೋಹಣ ರಜತ ಮಹೋತ್ಸವ ಹಾಗೂ ಅಟವಿ ಮಲ್ಲಿಕಾರ್ಜುನ ದೇವರ ನಿರಂಜನ ನಿರಾಭಾರಿ ಚರಪಟ್ಟಾಧಿಕಾರ ಮಹೋತ್ಸವದ ಅಂಗವಾಗಿ ಭಾನುವಾರ ಆಯೋಜಿಸಿದ್ದ ಧರ್ಮಸಭಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ನಾವು ಧಾರ್ಮಿಕ ಸಂಕಷ್ಟ ಕಾಲದಲ್ಲಿದ್ದೇವೆ. ಸಮಾಜವನ್ನು ಸರಿಯಾದ ದಿಕ್ಕಿನಲ್ಲಿ ನಡೆಸಿಕೊಂಡು ಹೋಗುವ ನಿಟ್ಟಿನಲ್ಲಿ ಸ್ವಾಮೀಜಿಗಳ ಪಾತ್ರ ಪ್ರಮುಖವಾಗಿದೆ. ಜನಗಣತಿಯಂತೆ ಮನೆಮನೆಯಲ್ಲೂ ದೀಕ್ಷಾ ಗಣತಿ ಮಾಡಬೇಕಾದ ಅಗತ್ಯವಿದೆ. ಲಿಂಗ ದೀಕ್ಷೆ ಕಡ್ಡಾಯ ಮಾಡಬೇಕಾಗಿದೆ. ಸ್ವಾಮೀಜಿಗಳು ಭಕ್ತರ ಮನೆ ಹೊಕ್ಕು ಲಿಂಗ ದೀಕ್ಷೆ

ಚಿಕ್ಕತೊಟ್ಲುಕೆರೆಯ ಅಟವಿ ಜಂಗಮ ಸುಕ್ಷೇತ್ರದಲ್ಲಿ ಅಟವಿ ಮಹಾಸ್ವಾಮಿಗಳ 124ನೇ ಪುಣ್ಯಸ್ಮರಣೋತ್ಸವ ಹಮ್ಮಿಕೊಳ್ಳಲಾಗಿತ್ತು.

ಮಾಡಿಸಬೇಕು ಎಂದು ಸಲಹೆ ಮಾಡಿದರು.

ಈಗ ತ್ರಿಕಾಲ ಪೂಜೆ ಮಾಡುವವರಿಲ್ಲ, ಕನಿಷ್ಟ ವಾರಕ್ಕೊಮ್ಮೆ ಸಾಮೂಹಿಕ ಶಿವಪೂಜೆ ಮಾಡುವಂತಹ ಪದ್ದತಿ ಅನುಸರಿಸಬೇಕು. ಮಠಗಳಲ್ಲಿ ಇಂತಹ ಪೂಜೆಗೆ ವ್ಯವಸ್ಥೆಯಾಗಬೇಕು. ಈ ಮೂಲಕ ನಮ್ಮ ಆಚಾರ, ವಿಚಾರ ಸಂಪ್ರದಾಯ, ಪರಂಪರೆಯನ್ನು ಉಳಿಸುವ ಪ್ರಯತ್ನ ಮಾಡಬೇಕು ಎಂದು ಹೇಳಿದರು.

ಸಿದ್ಧಗಂಗಾ ಮಠದ ಶಿವಸಿದ್ದೇಶ್ವರ ಸ್ವಾಮೀಜಿ ಮಾತನಾಡಿ, ಹಸಿದವರಿಗೆ ಅನ್ನ ಇಕ್ಕುವುದು, ಜ್ಞಾನ ನೀಡುವುದು ನಮ್ಮ ಮಠಗಳ ಪರಂಪರೆ. ಈ ಮೂಲಕ ಮಠಗಳು ಕೇವಲ ಧಾರ್ಮಿಕ ಕೇಂದ್ರವಾಗಿಲ್ಲ, ಸಮಾಜ ಸೇವಾ ಕೇಂದ್ರಗಳಾಗಿಯೂ ಇವೆ. ನಮ್ಮ ಮಠಗಳ ದಾಸೋಹ ಸೇವೆ ಆಧುನಿಕ ಕರ್ನಾಟಕದಲ್ಲಿ ಪ್ರಮುಖ ಪಾತ್ರ ವಹಿಸಿದೆ. ನಾಡಿನ ಅಂತರಂಗ-ಬಹಿರಂಗ ಕಟ್ಟುವಲ್ಲಿ ಕ್ರಿಯಾಶೀಲವಾಗಿದೆ ಎಂದು ಹೇಳಿದರು.

ಅಟವಿ ಶಿವಲಿಂಗ ಸ್ವಾಮೀಜಿ ಮಾತನಾಡಿ, ಈಗಿನವರಿಗೆ ಧರ್ಮ ಶ್ರದ್ಧೆ ಕಡಿಮೆಯಾಗಿದೆ. ನಮ್ಮ ಆಚಾರವಿಚಾರಗಳನ್ನು ಮರೆಯುತ್ತಿದ್ದಾರೆ.ನಮ್ಮ ಆಚಾರ, ಪದ್ಧತಿ, ಸಂಸ್ಕಾರ, ಪರಂಪರೆಯ ಮಹತ್ವವನ್ನು ಹಿರಿಯರು ಮಕ್ಕಳಿಗೆ ತಿಳಿಸಬೇಕು.ಸ್ವಾಮೀಜಿಗಳು ಭಕ್ತರಿಗೆ ಸರಿಯಾದ ಮಾರ್ಗದರ್ಶನ ನೀಡಬೇಕು. ಅಟವೀ ಮಠಕ್ಕೆ ಉತ್ತರಾಧಿಕಾರಿಯಾಗಿ ಮಲ್ಲಿಕಾರ್ಜುನ ದೇವರನ್ನು ನೇಮಿಸಲಾಗಿದೆ. ಇವರನ್ನು ಭಕ್ತರ ಮಡಿಲಿಗೆ ಹಾಕುತ್ತಿದ್ದೇವೆ ಭಕ್ತಿಯ ಹಾಲು ಕುಡಿಸಿ ಶಕ್ತಿ ತುಂಬಿರಿ ಎಂದರು.

ಸಾಸನೂರು ಮಠದ ಮಹಾಂತಲಿಂಗ ಶಿವಾಚಾರ್ಯ ಸ್ವಾಮೀಜಿ, ಆರಕೆರೆ ಮಠದ ಶಿವಲಿಂಗ ಸ್ವಾಮೀಜಿ, ಬೆಳ್ಳಾವಿ ಕಾರದ ಮಠದ ಕಾರದ ವೀರಬಸವ ಸ್ವಾಮೀಜಿ, ಸಿದ್ದರಬೆಟ್ಟದ ವೀರಭದ್ರ ಶಿವಾಚಾರ್ಯ ಸ್ವಾಮೀಜಿ, ಗುಡ್ಡದಾನ್ವೇರಿ ಮಠದ ಶಿವಯೋಗೀಶ್ವರ ಸ್ವಾಮೀಜಿ, ಅಟವಿ ಮಲ್ಲಿಕಾರ್ಜುನ ದೇವರು, ತುಮಕೂರು ನಗರ ವೀರಶೈವ ಸಮಾಜ ಅಧ್ಯಕ್ಷ, ಮಠದ ಆಡಳಿತ ಮಂಡಳಿ ಪ್ರಧಾನ ಕಾರ್ಯದರ್ಶಿ ಟಿ.ಬಿ.ಶೇಖರ್, ಮಠದ ಆಡಳಿತ ಮಂಡಳಿ ಟ್ರಸ್ಟಿಗಳಾದ ಸಿ.ಮಹದೇವಪ್ಪ, ಬೆಟ್ಟಯ್ಯ, ಜಗದೀಶ್ಚಂದ್ರ, ರವಿಶಂಕರ್, ಮಂಜುನಾಥ್ ಬದ್ನಾಳ್, ಮುಖಂಡರಾದ ಕೋರಿ ಮಂಜುನಾಥ್, ಟಿ.ಸಿ.ಓಹಿಲೇಶ್ವರ್, ಅತ್ತಿರೇಣುಕಾನಂದ, ಶಿವಕುಮಾರ್, ಶಿವಲಿಂಗಮ್ಮ, ಹೆಬ್ಬಾಕ ಮಲ್ಲಿಕಾರ್ಜುನ್, ನಂಜಯ್ಯ,ರಾಜೇಕದ್ರಕುಮಾರ್, ವಿಶ್ವನಾಥ್ ಅಪ್ಪಾಜಪ್ಪ, ಚಂದ್ರಶೇಖರ್, ಟಿ.ಆರ್. ಅನುಸೂಯಮ್ಮ, ಬಾಲಚಂದ್ರ, ಶ್ರೀಧರ್ ಭಾಗವಹಿಸಿದ್ದರು.

ಇಂದಿನ ಕಾರ್ಯಕ್ರಮ

ಬ್ರಾಹ್ಮಿ ಮುಹೂರ್ತದಲ್ಲಿ ನಿರಾಭಾರಿ ನಿರಂಜನ ಜಂಗಮ ದೀಕ್ಷೆ ಚಿನ್ಮಯಿ ಅನುಗ್ರಹ ಕಾರ್ಯಕ್ರಮ ನಡೆಯಲಿದೆ. ಅಟವಿ ಶಿವಲಿಂಗ ಸ್ವಾಮೀಜಿಗಳ ಅಧ್ಯಕ್ಷತೆಯ ಈ ಕಾರ್ಯಕ್ರಮದಲ್ಲಿ ಹುಕ್ಕೇರಿ ಮಠದ ಸದಾಶಿವ ಸ್ವಾಮೀಜಿ, ಚಿಟ್ಟದಹಳ್ಳಿ ಗವಿಮಠದ ಚಂದ್ರಶೇಖರ ಸ್ವಾಮೀಜಿ, ತಾಳಗುಪ್ಪ ಮಠದ ಸಿದ್ದವೀರ ಸ್ವಾಮೀಜಿ, ಅರಕೆರೆಮಠದ ಶಿವಲಿಂಗಸ್ವಾಮೀಜಿ, ಬೆಳ್ಳಾವಿ ಕಾರದ ಮಠದ ಶಿವಾಚಾರ್ಯ ಸ್ವಾಮೀಜಿ, ಗುಡ್ಡದ ಆನ್ವೇರಿ ಮಠದ ಶಿವಯೋಗೀಶ್ವರ ಸ್ವಾಮೀಜಿಗಳ ಪೌರೋಹಿತ್ಯದಲ್ಲಿ ಮಲ್ಲಿಕಾರ್ಜುನ ದೇವರಿಗೆ ಚಿನ್ಮಯ ಅನುಗ್ರಹ ನೀಡಲಾಗುವುದು.

ಚಾಂಪಿಯನ್‌ಗಳಿಗೆ ಪ್ರಶಸ್ತಿ ಪ್ರದಾನ

ಗುಡ್ಡಗಾಡು ಓಟದ ಸ್ಪರ್ಧೆಯಲ್ಲಿ ವಿವಿ ವಿಜ್ಞಾನ ಕಾಲೇಜು ಸಮಗ್ರ ಚಾಂಪಿಯನ್

ತುಮಕೂರು: ವಿಶ್ವವಿದ್ಯಾನಿಲಯದ ವತಿಯಿಂದ ಪುರುಷ-ಮಹಿಳಾ ವಿದ್ಯಾರ್ಥಿಗಳಿಗಾಗಿ ಆಯೋಜಿಸಲಾಗಿದ್ದ ಅಂತರ ಕಾಲೇಜು 10ಕಿ.ಮೀ. ಗುಡ್ಡಗಾಡು ಓಟದ ಸ್ಪರ್ಧೆಯಲ್ಲಿ ಗರಿಷ್ಠ ಸ್ಥಾನ ಪಡೆದು ಸಮಗ್ರ ಚಾಂಪಿಯನ್‌ಶಿಪ್‌ಗೆ ಭಾಜನರಾದ ವಿವಿ ಕಲಾ ಕಾಲೇಜಿನ ವಿದ್ಯಾರ್ಥಿಗಳಿಗೆ ಸೋಮವಾರ ರಾಷ್ಟ್ರೀಯ ಶಿಕ್ಷಣ ದಿನಾಚರಣೆಯ ಸಂದರ್ಭದಲ್ಲಿ ಕುಲಪತಿ ಪ್ರೊ. ಎಂ. ವೆಂಕಟೇಶ್ವರಲು ಪ್ರಶಸ್ತಿ ಪ್ರದಾನ ಮಾಡಿದರು.

ಕುಲಸಚಿವೆ ನಾಹಿದಾ ಜ಼ಮ್ ಜ಼ಮ್, ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಭಾಗದ ಮುಖ್ಯಸ್ಥ ಡಾ. ಎ. ಎಂ. ಮಂಜುನಾಥ, ವಿಜ್ಞಾನ ಕಾಲೇಜಿನ ಪ್ರಾಂಶುಪಾಲ ಪ್ರೊ. ಪ್ರಕಾಶ್ ಎಂ. ಶೇಟ್, ಪ್ರೊ. ಹರಿಪ್ರಸಾದ್ ಟಿ. ಎನ್., ಸಹ ಪ್ರಾಧ್ಯಾಪಕ ಡಾ. ರಾಮಕೃಷ್ಣ ಜಿ. ಇದ್ದರು. ಗುಡ್ಡಗಾಡು ಓಟದ ಸ್ಪರ್ಧೆಯಲ್ಲಿ ವಿವಿ ವಿಜ್ಞಾನ ಕಾಲೇಜಿನ ಅವದೇಶ್ ನಿಶಾದ ಮೊದಲ ಸ್ಥಾನ, ನಿಖಿಲ್ ಎಸ್. ಮೂರನೆಯ ಸ್ಥಾನ ಹಾಗೂ ದೇವರಾಜ ನಾಲ್ಕನೆಯ ಸ್ಥಾನ ಪಡೆದಿದ್ದಾರೆ.

ಕೆಎಎಸ್ ಪರೀಕ್ಷೆಗೆ 30 ದಿನ ತರಬೇತಿ

ಚಿಕ್ಕಬಳ್ಳಾಪುರ: ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ವತಿಯಿಂದ, ಕರ್ನಾಟಕ ಲೋಕ ಸೇವಾ ಆಯೋಗದವರು 2024ರ ಡಿಸೆಂಬರ್ 29 ರಂದು ನಡೆಸಲಿರುವ ಕೆಎಎಸ್ ಪರೀಕ್ಷೆಗೆ 30 ದಿನಗಳ ತರಬೇತಿಯನ್ನು ಮೈಸೂರಿನ ಕೇಂದ್ರ ಕಚೇರಿಯಲ್ಲಿ ನಡೆಸಲು ನಿರ್ಧರಿಸಲಾಗಿದೆ.

ಆಸಕ್ತರು ನವೆಂಬರ್ 16 ರೊಳಗಾಗಿ ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ಕ.ರಾ.ಮು.ವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ಕಚೇರಿಯಲ್ಲಿ ಬೆಳಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆಯೊಳಗಾಗಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬಹುದೆಂದು ಕರಾಮುವಿ ಕುಲಸಚಿವ ಪ್ರೊ. ಕೆ.ಬಿ. ಪ್ರವೀಣ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ವಿವರಗಳಿಗೆ 0821-2515944 ಸಂಪರ್ಕಿಸಬಹುದಾಗಿದೆ.

ಇಂದಿರಾ ಕ್ಯಾಂಟೀನ್ ಅವ್ಯವಸ್ಥೆಯ ಆಗರ

ಕೋಲಾರ: ನಗರದ ಖಾಸಗಿ ಬಸ್ ನಿಲ್ದಾಣದಲ್ಲಿರುವ ಇಂದಿರಾ ಕ್ಯಾಂಟಿನ್‌ನಲ್ಲಿ ಸಮರ್ಪಕ ನಿರ್ವಹಣೆ ಇಲ್ಲದೆ ಜನರ ಪಾಲಿಗೆ ಇದ್ದೂ ಇಲ್ಲದಂತಾಗಿದ್ದು ಸಮಸ್ಯೆಗಳ ಆಗರವಾಗಿದೆ. ಸಾರ್ವಜನಿಕ ಶೌಚಾಲಯದ ಪಕ್ಕದಲ್ಲೇ ನಿರ್ಮಾಣವಾಗಿರುವ ಇಂದಿರಾ ಕ್ಯಾಂಟೀನ್‌ಗೆ ಜನತೆ ಮೂಗು ಮುಚ್ಚಿಕೊಂಡೇ ಬರಬೇಕಾದ ಅನಿವಾರ್ತತೆ ಇದ್ದು ಆವರಣದಲ್ಲಿ ಅನಧೀಕೃತವಾಗಿ ಆಟೋ ಮತ್ತು ದ್ವಿಚಕ್ರವಾಹನಗಳ ನಿಲುಗಡೆ ಆಗುವುದರಿಂದಾಗಿ ಪೆಟ್ರೋಲ್, ಡೀಸೆಲ್, ಗ್ಯಾಸ್ ವಾಸನೆಯಿಂದಾಗಿ ಊಟ-ತಿಂಡಿ ಸೇವನೆ ಕಷ್ಟಕರವಾಗಿದೆ.

ಖಾಸಗಿ ಬಸ್ ನಿಲ್ದಾಣದಲ್ಲಿ ಪಾರ್ಕಿಂಗ್ ಸಮಸ್ಯೆ ಇರುವುರಿಂದಾಗಿ ಚಾಲಕರು ನೇರವಾಗಿ ವಾಹನಗಳನ್ನು ತಂದು ಇಂದಿರಾ ಕ್ಯಾಂಟಿನ್ ಆವರಣದಲ್ಲಿ ನಿಲ್ಲಿಸುವುದರಿಂದಾಗಿ ಜನತೆಗೆ ತೊಂದರೆ ಆಗಿದ್ದು ಈ ಸಂಬಂಧ ಚಾಲಕರನ್ನು ಪ್ರಶ್ನೆ ಮಾಡಿದರೆ ನಾವೇನು ಪಾರ್ಕಿಂಗ್ ಪುಕ್ಕಟೆ ಮಾಡಲ್ಲ, ಗಾಡಿಗೆ 10 ರು. ಕೊಡ್ತೀವಿ ಎಂದು ಗದರಿಸುತ್ತಾರೆ. ಇಂದಿರಾ ಕ್ಯಾಂಟಿನ್ ಸಿಬ್ಬಂದಿ ಅನಧೀಕೃತವಾಗಿ ನಡೆಸುತ್ತಿರುವ ಪಾರ್ಕಿಂಗ್ ದಂಧೆಯಿಂದಾಗಿ ಜನತೆಗೆ ತೊಂದರೆ ಆಗಿದ್ದು ಈ ಸಂಬಂಧ ಹತ್ತು ಹಲವಾರು ದೂರುಗಳು ನಗರಸಭೆ ಪೌರಾಯುಕ್ತರಿಗೆ ಸಲ್ಲಿಸಲಾಗಿದ್ದರೂ ಕ್ರಮ ಕೈಗೊಂಡಿಲ್ಲ, ನಗರಸಭೆಯಲ್ಲಿ ಪೌರಾಯುಕ್ತರ ಹುದ್ದೆ ಖಾಲಿ ಇರುವುದರಿಂದಾಗಿ ಇಂದಿರಾ ಕ್ಯಾಂಟಿನ್ ನಿರ್ವಹಣೆ ಇಲ್ಲದಂತಾಗಿದೆ.

ಕ್ಯಾಂಟಿನ್ ಸಿಬ್ಬಂದಿ ಹಿಂದಿ ಮೂಲದವರಾಗಿದ್ದು ಕನ್ನಡ ಬರುವುದಿಲ್ಲ, ಹೀಗಾಗಿ ಏನು ಕೇಳಿದರೂ ಚಲ್ ಚಲ್ ಎಂದು

ಕೋಲಾರದ ಇಂದಿರಾ ಕ್ಯಾಂಟಿನ್ ಅನಧೀಕೃತ ಪಾರ್ಕಿಂಗ್ ಸ್ಥಳವಾಗಿ ಮಾರ್ಪಾಟಾಗಿದೆ.

ಎರಡೇ ಬಾರಿ ಊಟ ವಿತರಣೆ

ಇಂದಿರಾ ಕ್ಯಾಂಟೀನ್‌ನಲ್ಲಿ ಒಂದು ತಿಂಡಿ ಮತ್ತು ಎರಡು ಹೊತ್ತು ಊಟ ವಿತರಣೆ ಆಗಬೇಕಾಗಿದ್ದು ಕಡ್ಡಾಯವಾದರೂ ಎರಡೇ ಬಾರಿ ವಿತರಣೆ ಆಗುತ್ತಿದ್ದು ಮತ್ತೊಂದು ಪುಕ್ಕಟೆ ಬಿಲ್ ಆಗುತ್ತಿದೆ ಎಂಬ ವ್ಯಾಪಕ ದೂರುಗಳಿವೆ. ಪಿಡಿ ಅವರೇ ಪ್ರಭಾರ ಪೌರಾಯುಕ್ತರಾಗಿರುವುದರಿಂದಾಗಿ ಸಮಸ್ಯೆ ಆಗಿದ್ದು ಹೀಗಾಗಿ ಇಂದಿರಾ ಕ್ಯಾಂಟಿನ್ ಸಿಬ್ಬಂದಿಯನ್ನು ಕೇಳುವವರೇ ಇಲ್ಲದಂತಾಗಿದೆ.

ಗದರುತ್ತಾರೆ ಎಂಬುದು ನಗರವಾಸಿಗಳ ಅಳಲಾಗಿದ್ದು ಇನ್ನಾದರೂ ಜಿಲ್ಲಾಧಿಕಾರಿಗಳು ಇತ್ತ ಗಮನಹರಿಸಬೇಕಾಗಿದೆ. ಇಷ್ಟಾದರೂ ಇಂದಿರಾ ಕ್ಯಾಂಟಿನ್ ಹೆಸರಿನಲ್ಲಿ ತಿಂಗಳಿಗೆ ಲಕ್ಷಾಂತರ ಬಿಲ್ ಮಾಡಲಾಗುತ್ತಿದ್ದು ಈ ಸಂಬಂಧ ತನಿಖೆ ನಡೆಸಬೇಕೆಂದು ಖಾದ್ರೀಪುರದ ಶ್ಯಾಮನಾಯಕ್ ಆಗ್ರಹಿಸಿದ್ದಾರೆ.

ತ್ಯಾಗದ ಪ್ರತೀಕ ಒನಕೆ ಓಬವ್ವ: ತಹಸೀಲ್ದಾರ್

ಬಾಗೇಪಲ್ಲಿ: ಚಿತ್ರದುರ್ಗದ ಕೋಟೆಯನ್ನು ಶತ್ರು ಸೈನ್ಯದಿಂದ ಸಂರಕ್ಷಣೆ ಮಾಡುವ ಮೂಲಕ ಸ್ವಾಮಿನಿಷ್ಠೆ, ಸಮಯ ಸ್ಫೂರ್ತಿ ಮತ್ತು ತ್ಯಾಗದ ಪ್ರತೀಕ ಒನಕೆ ಓಬವ್ವ ಧೈರ್ಯ, ಶೌರ್ಯ ಮೆರೆದಿದ್ದಾರೆ. ಒನಕೆ ಓಬವ್ವನ ಗುಣಗಳು ಎಲ್ಲರೂ ಪಾಲಿಸಿದಾಗ ಮಾತ್ರ ಒನಕೆ ಓಬವ್ವ ಜಯಂತಿ ಆಚರಣೆಗೆ ಅರ್ಥ ಬರುತ್ತದೆ ಎಂದು ತಹಶಿಲ್ದಾರ್ ಮನೀಶಾ ಮಹೇಶ್ ಪತ್ರಿ ಹೇಳಿದರು.

ತಹಸೀಲ್ದಾರ್ ಸಭಾಂಗಣದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣೆ ಸಮಿತಿ ವತಿಯಿಂದ ನಡೆದ ವೀರ ವನಿತೆ ಒನಕೆ ಓಬವ್ವಳ ಜಯಂತಿ ಅಂಗವಾಗಿ ಚಿತ್ರಪಟಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು.

ಎದುರಾಳಿ ಸೈನಿಕರು ಕೋಟೆಯನ್ನು ಮುತ್ತಿದಾಗ ತನ್ನ ಮನೆಯಲ್ಲಿ ಆಹಾರ ಸಂಸ್ಕರಣೆಗೆ ಬಳಸುವಂತಹ ಒನಕೆಯನ್ನೆ ಆಯುಧವಾಗಿ ಬಳಸಿ ನೂರಾರು ಸೈನಿಕರ ರುಂಡಗಳನ್ನು ಚಂಡಾಡಿ, ಕೋಟೆಯನ್ನು ರಕ್ಷಿಸಿದ ವೀರ ವನಿತೆ ಒನಕೆ ಓಬವ್ವನ ಸಮಯ ಪ್ರಜ್ಞೆ, ಧೈರ್ಯ ಮತ್ತು ಸಾಹಸಗಳು ನಮ್ಮ ನಾಡಿನ ಹೆಣ್ಣು ಮಕ್ಕಳಿಗೆ ಸ್ಫೂರ್ತಿಯಾಗಬೇಕು ಎಂದು ತಿಳಿಸಿದರು.

ವೀರ ವಿನಿತೆ ಒನಕೆ ಓಬವ್ವ ನಮಗೆಲ್ಲರಿಗೂ ಆದರ್ಶ ಪ್ರಾಯರಾಗಿದ್ದಾರೆ. ಮಹಿಳೆಯರು ಅವರ ಆದರ್ಶಗಳನ್ನು

ಓಬವ್ವಳ ಜಯಂತಿ ಅಂಗವಾಗಿ ಚಿತ್ರಪಟಕ್ಕೆ ಪುಷ್ಪ ನಮನ ಸಲ್ಲಿಸಿ ತಹಶಿಲ್ದಾರ್ ಮನೀಶಾ ಮಹೇಶ್ ಪತ್ರಿ ಅವರು ಮಾತನಾಡಿದರು.

ಪಾಲಿಸುವ ಮೂಲಕ ನಾಡಿನ ಐಕ್ಯತೆಗೆ ಪಣತೊಡಬೇಕು.

ಛಲವಾದಿ ಸಮುದಾಯದ ಮುಖಂಡ ಟಿ.ರಾಮಪ್ಪ ಮಾತನಾಡಿ ಸಮಾಜದಲ್ಲಿ ಛಲವಾದಿ ಸಮುದಾಯಕ್ಕೆ ಆರ್ಥಿಕವಾಗಿ, ಶೈಕ್ಷಣಿಕವಾಗಿ, ಸಾಮಾಜಿಕವಾಗಿ ಹಾಗೂ ರಾಜಕೀಯ ವಿಚಾರದಲ್ಲಿ ಅನ್ಯಾಯವಾಗುತ್ತಿದೆ. ಆದ್ದರಿಂದ ರಾಜ್ಯದಲ್ಲಿನ ಚಲವಾದಿ ಸಮುದಾಯ ಒಗ್ಗೂಡಬೇಕಿದೆ. ಜನಾಂಗದ ಇತರೆ ಮಕ್ಕಳನ್ನು ಉತ್ತೇಜಿಸಿದಂತಾಗುತ್ತದೆ. ಹೋರಾಟ, ಸಂಘಟನೆ ಮೂಲಕ ಸರಕಾರದಿಂದ ಸಿಗುವ ಸೌಲತ್ತುಗಳನ್ನು ಪಡೆದುಕೊಂಡು ಮಕ್ಕಳನ್ನು ವಿದ್ಯಾವಂತರನ್ನಾಗಿ ಮಾಡಬೇಕಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾಲೂಕು ಆರೋಗ್ಯ ಅಧಿಕಾರಿಗಳಾದ ಡಾ.ಸತ್ಯನಾರಾಯಣ ರೆಡ್ಡಿ,ಬಿಇಒ ಎನ್.ವೆಂಕಟೇಶಪ್ಪ, ಪುರಸಭೆ ಮುಖ್ಯಾಧಿಕಾರಿಗಳಾದ ಶ್ರೀನಿವಾಸ್, ಬಿಳ್ಳೂರು ನಾಗರಾಜು, ಸಾಕ್ಷರತೆ ಇಲಾಖೆ ಶಿವಪ್ಪ, ಹಾಗೂ ಛಲವಾದಿ ಸಮುದಾಯದ ಮುಖಂಡರು ವಿವಿಧ ಇಲಾಖೆ ಅಧಿಕಾರಿಗಳು ಹಾಜರಿದ್ದರು.

ಡ್ರಗ್ಸ್‌ಗೆ ದಾಸನಾದ ಮಗ

ತುಮಕೂರು: ನನ್ ಮಗ ಸರಿಯಿಲ್ಲ. ಗಾಂಜಾ ಹೊಡೀತಾನೆ, ಡ್ರಗ್ಸ್ ತಗೋತಾನೆ. ನನ್ ಮಗನನ್ನು ದಯಮಾಡಿ ಜೈಲಿಗೆ ಹಾಕಿ ಇಲ್ಲಾ ಅವನನ್ನು ಸಾಯಿಸೋಕೆ ಪರ್ಮಿಷನ್ ಕೊಡಿ.... ಹೀಗೆ ತಾಯಿಯೊಬ್ಬಳು ಡ್ರಗ್ಸ್ ದಂಧೆಗೆ ದಾಸನಾಗಿ ಜೀವನ ಹಾಳು ಮಾಡಿಕೊಳ್ಳುತ್ತಿರುವ ಮಗನ ಸ್ಥಿತಿಯನ್ನು ನೋಡಿ ಬೇಡುತ್ತಿದ್ದ ಪರಿ.

ಜಿಲ್ಲೆಯ ತುರುವೇಕೆರೆ ಪಟ್ಟಣದಲ್ಲಿ ಸಣ್ಣ ಹೋಟೆಲ್ ಇಟ್ಟುಕೊಂಡು ಜೀವನ ನಡೆಸುತ್ತಿರುವ ರೇಣುಕಮ್ಮ ಅವರು ,ದುಶ್ಚಟಕ್ಕೆ ಬಲಿಯಾಗಿ ತಮ್ಮ 20 ವರ್ಷದ ಮಗ ಅಭಿ ಕೆಟ್ಟ ಸ್ನೇಹಿತರ ಸಹವಾಸಕ್ಕೆ ಬಿದ್ದು ಕಲಿಯಬಾರದ ಚಟಗಳನ್ನೆಲ್ಲಾ ಕಲಿತಿದ್ದಾನೆ. ಚಟಗಳಿಂದ ಮುಕ್ತಗೊಳಿಸಲು ಸಾಕಷ್ಟು ಪ್ರಯತ್ನಪಟ್ಟಿದ್ದೇನೆ. ಆದರೂ ಪ್ರಯೋಜನವಾಗಿಲ್ಲ. ಆದ್ದರಿಂದ ಮಗನನ್ನು ಸಾಯಿಸಲು ಅನುಮತಿ ಕೊಡಿ ಎಂದು ನೊಂದು ಬೇಡುತ್ತಿದ್ದಾರೆ.

ಪಟ್ಟಣದಲ್ಲಿ ಗಾಂಜಾ ಸೇರಿದಂತೆ ಹಲವಾರು ಮಾದಕ ವಸ್ತುಗಳು ಮಾರಾಟವಾಗುತ್ತಿವೆ. ಇದು ಯುವಕರನ್ನು ಹಾಳು ಮಾಡುತ್ತಿದೆ. ನನ್ನ ಮಗನೂ ಇಂತಹ ಜಾಲಕ್ಕೆ ಬಿದ್ದು ತನ್ನ ಜೀವನವನ್ನು ಹಾಳು ಮಾಡಿಕೊಂಡಿದ್ದಾನೆ. ಹೀಗೇ ಪಟ್ಟಣದಲ್ಲಿ ಸಾಕಷ್ಟು ಯುವಕರಿದ್ದಾರೆ. ಇವರಿಗೆ ಮಾದಕ ವಸ್ತುಗಳನ್ನು ಮಾರಾಟ ಮಾಡುತ್ತಿರುವವರು ಯಾರು ಎಂಬುದನ್ನು ದಯಮಾಡಿ ಪತ್ತೆ ಹಚ್ಚಿ ಅಮಾಯಕರನ್ನು ಕಾಪಾಡಿ ಎಂದು ರೇಣುಕಮ್ಮ ಪೋಲಿಸರಲ್ಲಿ ಮನವಿ ಮಾಡಿಕೊಂಡಿದ್ದಾರೆ.

ದಯಮಾಡಿ ನನ್ನ ಮಗನನ್ನು ಜೈಲಿಗೆ ಹಾಕಿಯಾದರೂ ಈ ದುಶ್ಚಟಗಳಿಂದ ದೂರ ಮಾಡಬೇಕು. ನನ್ನ ಮಗ ಹಾಳಾದ ರೀತಿಯಲ್ಲಿ ಇನ್ನೂ ಹಲವಾರು ಮಕ್ಕಳಿದ್ದಾರೆ. ಇಲ್ಲವೇ ನನ್ನ ಮಗನನ್ನು ಸಾಯಿಸಕ್ಕೆ ಪರ್ಮಿಷನ್ ಕೊಡಿ ನಾನು ಅವನನ್ನು ಸಾಯಿಸಿ ನಾನೂ ಸಾಯ್ತೀನಿ ಎಂದು ಪೋಲಿಸರಲ್ಲಿ ಮನವಿ ಮಾಡಿಕೊಂಡಿದ್ದಾರೆ.

ದುಶ್ಚಟಕ್ಕೆ ದಾಸನಾಗಿರುವ ಯುವಕ.

ವರದಿ ಪ್ರಕಟ

ಜಿಲ್ಲೆಯಲ್ಲಿ ಹೆಚ್ಚುತ್ತಿರುವ ಆಕ್ರಮ ಚಟುವಟಿಕೆಗಳ ಬಗ್ಗೆ ಪತ್ರಿಕೆಯಲ್ಲಿ ನ.4ರಂದು ವರದಿ ಪ್ರಕಟವಾಗಿತ್ತು. ಇಡೀ ಜಿಲ್ಲಾದ್ಯಂತ ಡ್ರಗ್ಸ್ ದಂಧೆ ಸರಾಗವಾಗಿ ನಡೆಯುತ್ತಿದೆ. ಡ್ರಗ್ಸ್ ಅಮಲಿಗೆ ಯುವ ಜನತೆ ಬಲಿಯಾಗುತ್ತಿದ್ದಾರೆ. ಡ್ರಗ್ಸ್ ಮಾರಾಟದ ಬಗ್ಗೆ ಪೊಲೀಸ್ ಇಲಾಖೆ ಸೇರಿದಂತೆ ಸಂಬಂಧಿಸಿದ ಇಲಾಖೆಗಳಿಗೆ ಸಂಪೂರ್ಣ ಮಾಹಿತಿ ಇದ್ದರೂ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ. ಪ್ರಭಾವಿಗಳು ದಂಧೆಯನ್ನು ನಡೆಸಿ ಯುವಕರನ್ನು ಹಾಳು ಮಾಡುತ್ತಿದ್ದಾರೆ. ಈ ಬಗ್ಗೆ ಕಠಿಣ ಕ್ರಮ ಕೈಗೊಳ್ಳದಿದ್ದರೆ ಕಲ್ಪತರು ನಾಡು ಡ್ರಗ್ಸ್ ನಾಡಾಗುವುದರಲ್ಲಿ ಅನುಮಾನವಿಲ್ಲ.

ರೇಣುಕಮ್ಮಳಿಗೆ ಧೈರ್ಯ ತುಂಬಿದ ಸಬ್ ಇನ್ ಪೆಕ್ಟರ್ ಪಾಂಡು, ಅಭಿ ಕೆಟ್ಟ ಸ್ನೇಹಿತರ ಸಹವಾಸದಿಂದ ಹಾಳಾಗಿದ್ದಾನೆ. ಅವನನ್ನು ಸರಿದಾರಿಗೆ ತರುವ ಪ್ರಯತ್ನಕ್ಕೆ ತಾವು ಕೈ ಜೋಡಿಸುವುದಾಗಿ ಹೇಳಿದ್ದಾರೆ. ನಿಮ್ಹಾನ್ಸ್‌ನಲ್ಲಿ ಸೂಕ್ತ ಚಿಕಿತ್ಸೆ ಕೊಡಿಸಲು ತಾವು ನೆರವು ನೀಡುವುದಾಗಿ ಧೈರ್ಯ ತುಂಬಿದ್ದಾರೆ. ಸದ್ಯ ತುರುವೇಕೆರೆ ಪೊಲಿಸರು ಅಭಿಯನ್ನು ವಶಕ್ಕೆ ಪಡೆದುಕೊಂಡಿದ್ದಾರೆ.

ಡಾ.ನಾ.ಸೋಮೇಶ್ವರ ಮುಡಿಗೆ ಸಾಹಿತ್ಯ ಕಲ್ಪತರು ಪ್ರಶಸ್ತಿ

ತಿಪಟೂರು: ಭಾವನಾತ್ಮಕವಾಗಿ ಕನ್ನಡ ಭಾಷೆ ನಮ್ಮ ಭಾಷೆ, ತಾಯಿ ಭಾಷೆ ಎಂಬುದು ಎಲ್ಲಿಯವರೆವಿಗೂ ಜನರ ಮನಸ್ಸಿನಲ್ಲಿ ಬರುವುದಿಲ್ಲವೋ ಅಲ್ಲಿಯವರೆವಿಗೂ ಎಷ್ಟು ಕನ್ನಡ ರಾಜ್ಯೋತ್ಸವ ಆಚರಿಸಿದರೂ ಪ್ರಯೋಜನವಿಲ್ಲ ಎಂದು ಬೆಂಗಳೂರಿನ ಪ್ರಸಿದ್ಧ ಬರಹಗಾರ ಹಾಗೂ ಭಾಷಣಕಾರ ಡಾ.ನಾ.ಸೋಮೇಶ್ವರ್ ತಿಳಿಸಿದರು.

ನಗರದ ಸತ್ಯಗಣಪತಿ ಆಸ್ಥಾನ ಮಂಟಪದಲ್ಲಿ ಶನಿವಾರ ಬಯಲುಸೀಮೆ ಸಾಮಾಜಿಕ, ಸಾಂಸ್ಕೃತಿಕ ಸಂಘದ 23ನೇ ವರ್ಷದ ವಾರ್ಷಿಕೋತ್ಸವ ಸಮಾರಂಭದ ಅಂಗವಾಗಿ ಭಾವಗೀತ ಗಾಯನ, ಸಾಹಿತ್ಯ ಕಲ್ಪತರು ಪ್ರಶಸ್ತಿ'' ಪ್ರಧಾನ ಹಾಗೂ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದರು. ಕನ್ನಡ ನಾಡಿನಲ್ಲಿ ಜನಿಸಿದಂತಹ ಪ್ರತಿಯೊಬ್ಬರು ಕನ್ನಡ ಸಾಹಿತ್ಯ, ಭಾಷೆಯನ್ನು ಉಳಿಸಿ ಬೆಳೆಸುವಂತಹ ಕಾಯಕವನ್ನು ಮಾಡಬೇಕಿದೆ. ದಿನಕಳೆದಂತೆ ಇತರ ಭಾಷೆಗಳ ಮೇಲಿನ ವ್ಯಾಮೋಹ ಹೆಚ್ಚಾದಂತೆಲ್ಲಾ ಕನ್ನಡದ ಬಳಕೆ ಕಡಿಮೆಯಾಗುತ್ತಿರುವುವು ದುಃಖದ ಸಂಗತಿ. ಎರಡು ಸಾವಿರ ವರ್ಷಕ್ಕೂ ಹಳೆಯ ಕನ್ನಡ

ಸಾಹಿತ್ಯ ಕಲ್ಪತರು ಪ್ರಶಸ್ತಿ ಪ್ರದಾನ ಹಾಗೂ ಸನ್ಮಾನ ಕಾರ್ಯಕ್ರಮದಲ್ಲಿ ಡಾ.ನಾ. ಸೋಮೇಶ್ವರ್ ಅವರು ಮಾತನಾಡಿದರು.

ಭಾಷೆ ಬಗ್ಗೆ ಪ್ರತಿಯೊಬ್ಬ ಕನ್ನಡಿಗನ ಹೆಮ್ಮೆಯ ಸಂಕೇತವಾಗಿದೆ ಎಂದರು.

ವೀರ ವನಿತೆ ಓಬವ್ವ ಮಹಿಳೆಯರಿಗೆ ಆದರ್ಶ

ಗುಬ್ಬಿ : ವೀರ ವನಿತೆ ಒನಕೆ ಓಬವ್ವನವರ ಸಮಯ ಪ್ರಜ್ಞೆ, ಧೈರ್ಯ ಮತ್ತು ಸಾಹಸಗಳು ನಾಡಿನ ಹೆಣ್ಣು ಮಕ್ಕಳಿಗೆ ಸ್ಫೂರ್ತಿಯಾಗಬೇಕು ಎಂದು ತಹಸೀಲ್ದಾರ್ ಆರತಿ ಬಿ. ತಿಳಿಸಿದರು.
ಪಟ್ಟಣದ ತಾಲ್ಲೂಕು ಕಚೇರಿ ಕಂದಾಯ ಭವನದಲ್ಲಿ ತಾಲ್ಲೂಕು ಆಡಳಿತ ಹಾಗೂ ವಿವಿಧ ಸಂಘಟನೆಗಳ ವತಿಯಿಂದ ಏರ್ಪಡಿಸಿದ್ದ ಒನಕೆ ಓಬವ್ವ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿ, ಚಿತ್ರದುರ್ಗದ ಕೋಟೆಯ ಪಾಳೆಗಾರನಾಗಿದ್ದ ಮದಕರಿ ನಾಯಕನ ಕೋಟೆಯ ಕಾವಲುಗಾರ ಕಹಳೆ ಮದ್ದಹನುಮಪ್ಪನ ಹೆಂಡತಿ ಒನಕೆ ಓಬವ್ವ. ಕನ್ನಡ ನಾಡಿನ ವೀರ ವನಿತೆಯರಾದ ಕಿತ್ತೂರು ಚೆನ್ನಮ್ಮ, ರಾಣಿ ಅಬ್ಬಕ್ಕರ ಸಾಲಿನಲ್ಲಿ ಇರುವ ವೀರ ವನಿತೆ ಒನಕೆ ಓಬವ್ವನವರ ಒಬ್ಬರಾಗಿದ್ದಾರೆ. ಓಬವ್ವ ನಾರಿಶಕ್ತಿಯ ಪ್ರತೀಕವಾಗಿ ನಮಗೆ ಸ್ಫೂರ್ತಿಯಾಗಿದ್ದಾರೆ. ಸಮಯ ಪ್ರಜ್ಞೆಯಿಂದ ವೈರಿಗಳ ರುಂಡ ಚೆಂಡಾಡಿದ ವೀರ ವನಿತೆ ಒನಕೆ ಓಬವ್ವ ಅವರು ಇಂದು ಎಲ್ಲಾ ಮಹಿಳೆಯರಿಗೂ ಆದರ್ಶ ಮಹಿಳೆಯಾಗಿದ್ದಾರೆ ಎಂದರು.
ಈ ಕಾರ್ಯಕ್ರಮದಲ್ಲಿ ತಾಲ್ಲೂಕು ಪಂಚಾಯಿತಿ ಇಓ ಶಿವಪ್ರಕಾಶ್, ತಾಲೂಕು ವೈದ್ಯಾಧಿಕಾರಿ ಡಾ. ಬಿಂದು ಮಾಧವ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕಿ ವೀಣಾ, ಒಬಿಸಿ ಇಲಾಖೆ ಸಹಾಯಕ ನಿರ್ದೇಶಕಿ , ಎಇ ನಂದಾ, ಛಲವಾದಿ ಮಹಾಸಭಾದ ಅಧ್ಯಕ್ಷ ಟಿ.ಇ.ಈರಣ್ಣ, ಗೌರವಾಧ್ಯಕ್ಷ ಬಿ.ಲೋಕೇಶ್, ಜಿ.ಮಧು, ಗಿರಿಜಮ್ಮ, ಕಿಟ್ಟದಗುಪ್ಪೆ ನಾಗರಾಜ್, ಹೆಚ್ ಡಿ ಯಲ್ಲಪ್ಪ, ಚೇಳೂರು ಶಿವನಂಜಪ್ಪ, ತಾಲೂಕು ಮಟ್ಟದ ಅಧಿಕಾರಿಗಳು ಇದ್ದರು.

ಗ್ರಾಮೀಣ ಸೊಗಡಿಗೆ ಪ್ರತಿಭಾ ಕಾರಂಜಿ

ಕುಣಿಗಲ್: ಗ್ರಾಮೀಣ ಸೊಗಡನ್ನು ನಮ್ಮ ವಿದ್ಯಾರ್ಥಿಗಳಿಗೆ ಉಣಪಡಿಸಬೇಕು ಎಂಬ ಉದ್ದೇಶದಿಂದ ಈ ಬಾರಿ ಗ್ರಾಮೀಣ ಪ್ರದೇಶದ ದೊಡ್ಡಮಧುರೆ ಗ್ರಾಮದಲ್ಲಿ ತಾಲೂಕು ಮಟ್ಟದ ಪ್ರತಿಭಾಕಾರಂಜಿಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಲ್.ಬೋರೇಗೌಡ ತಿಳಿಸಿದರು.

ತಾಲೂಕಿನ ದೊಡ್ಡಮದರೆ ಸರಕಾರಿ ಪ್ರೌಢಶಾಲಾ ಆವರಣದಲ್ಲಿ ಹಮ್ಮಿಕೊಂಡಿದ್ದ ಪ್ರಾಥಮಿಕ ಮತ್ತು ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ನಡೆದ ಪ್ರತಿಭಾ ಕಾರಂಜಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾಮೀಣ ಪ್ರದೇಶದ ಮಕ್ಕಳಲ್ಲಿ ಅಡಗಿರುವ ಪ್ರತಿಭೆಯನ್ನು ಹೊರತರುವ ಸಲುವಾಗಿ ಪ್ರತಿಭಾ ಕಾರಂಜಿ ಅಂತಹ ಪತ್ಯೇತರ ಚಟುವಟಿಕೆಗಳು ಸಹಕಾರಿಯಾಗಿವೆ. ಸರ್ಕಾರದ ಮಹತ್ವಕಾಂಕ್ಷಿಯಾದ ಪ್ರತಿಭಾ ಕಾರಂಜಿಯ ಕಾರ್ಯಕ್ರಮವನ್ನು ನಡೆಸುವುದು ಇಲಾಖೆಯ ಆದ್ಯ ಕರ್ತವ್ಯವಾಗಿದೆ. ಗ್ರಾಮದ ಯುವಕರಲ್ಲ ಸೇರಿ ಶಾಲೆಯ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಿ ಒಂದು ಉತ್ತಮ ಮಾದರಿ

ಪ್ರತಿಭಾ ಕಾರಂಜಿ ಕಾರ್ಯಕ್ರಮವನ್ನು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಲ್.ಬೋರೇಗೌಡ ಅವರು ಉದ್ಘಾಟಿಸಿದರು.

ಶಾಲೆಯನ್ನಾಗಿ ಮಾಡುತ್ತಿದ್ದಾರೆ ಎಂದು ಅವರು ಶ್ಲಾಘಿಸಿದರು.

ದೊಡ್ಡಮಧುರೆ ಗ್ರಾಮದ ಊರಿನವರು ಸೇರಿಕೊಂಡು ಗ್ರಾಮದ ಮಲ್ಲಿಕಾರ್ಜುನ ಸ್ವಾಮಿ ದೇವಸ್ಥಾನದ ಬಳಿಯಿಂದ ಪ್ರತಿಭಾ ಕಾರಂಜಿ ನಡೆಯುವ ಸ್ಥಳದವರಿಗೆ ವಿವಿಧ ಕಲಾಜಾತಗಳೊಂದಿಗೆ ಅದ್ದೂರಿಯಾಗಿ ಮೆರವಣಿಗೆ ಸಾಗಿದರು. ಸಮಾರಂಭದಲ್ಲಿ ಎಸ್‌ಡಿಎಂಸಿ ಅಧ್ಯಕ್ಷರಾದ ರಮೇಶ್, ಗೌರಮ್ಮ, ದಾನಿಗಳಾದ ಸತ್ಯನಾರಾಯಣ ರಾವ್, ಪ್ರಕಾಶ್, ಕರವೇ ಗಂಗಾಧರ, ಪ್ರೌಢಶಾಲಾ ಮುಖ್ಯ ಶಿಕ್ಷಕರ ಸಂಘದ ಕಾರ್ಯದರ್ಶಿ ನರಸಿಂಹಮೂರ್ತಿ, ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಅಧ್ಯಕ್ಷ ಹರೀಶ್ , ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಗೋವಿಂದರಾಜು, ಬೋರೇಗೌಡ, ಪದಾಧಿಕಾರಿಗಳಾದ ಕಾಳೇಗೌಡ, ಮುಖ್ಯ ಶಿಕ್ಷಕಿ ಶಶಿಕಲಾ, ಅಮರನಾಥ್, ಬಿ. ಜೀವಂದರ ಕುಮಾರ್, ಉಮೇಶ, ಲೀಲಾ ವತಿ, ಹನುಮಂತರಾಯಪ್ಪ, ಮಾರುತೇಶ್ ವಿಶ್ವಪ್ರಕಾಶ್ , ಮೈತ್ರಿ ಮೈತ್ರಿ ಹಳೆಯ ವಿದ್ಯಾರ್ಥಿ ಸಂಘದ ಪದಾಧಿಕಾರಿಗಳು, ತಾಲೂಕು ದೈಹಿಕ ಪರಿವೀಕ್ಷಕರಾದ ಗೋಪಾಲಕೃಷ್ಣ, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ರಘು, ಇಸಿಓ ಸೋಮಶೇಖರ್ , ಬಿಆರ್‌ಪಿ, ಸಿಆರ್‌ಪಿಗಳು ಮತ್ತಿತರರು ಹಾಜರಿದ್ದರು.

ಶೈಕ್ಷಣಿಕ ಸಾಲ ಸೌಲಭ್ಯಕ್ಕೆ ಅರ್ಜಿ

ತುಮಕೂರು: ಕರ್ನಾಟಕ ಆರ್ಯವೈಶ್ಯ ಸಮುದಾಯ ಅಭಿವೃದ್ಧಿ ನಿಗಮವು ಅರಿವು-ಶೈಕ್ಷಣಿಕ ಸಾಲ ಯೋಜನೆಯಡಿ ಶೈಕ್ಷಣಿಕ ಸಾಲ ಸೌಲಭ್ಯ ಕಲ್ಪಿಸಲು ಆರ್ಯವೈಶ್ಯ ಸಮುದಾಯದ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ. ಈ ಯೋಜನೆಯಡಿ ಸಿ.ಇ.ಟಿ/ಎನ್.ಇ.ಇ.ಟಿ ಪ್ರವೇಶ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ವೃತ್ತಿಪರ ಕೋರ್ಸ್ ಹಾಗೂ ಪಿಹೆಚ್.ಡಿ. ವ್ಯಾಸಂಗ ಮಾಡುವ ಆರ್ಯವೈಶ್ಯ ವಿದ್ಯಾರ್ಥಿಗಳಿಗೆ ವಾರ್ಷಿಕ ಶೇ.2ರ ಬಡ್ಡಿದರದಲ್ಲಿ 1 ಲಕ್ಷ ರೂ.ಗಳ ಸಾಲ ನೀಡಲಾಗುವುದು. ವ್ಯಾಸಂಗ ಪೂರ್ಣಗೊಂಡ ನಂತರ 4 ತಿಂಗಳ ವಿರಾಮಾವಧಿಯ ನಂತರ 36 ಮಾಸಿಕ ಕಂತುಗಳಲ್ಲಿ ಸಾಲವನ್ನು ಮರುಪಾವತಿಸಬೇಕು. ಅರ್ಜಿದಾರರು 18 ರಿಂದ 35 ವರ್ಷದೊಳಗಿನವರಾಗಿದ್ದು, ಕುಟುಂಬದ ವಾರ್ಷಿಕ ವರಮಾನ 6,00,000 ರೂ.ಗಳ ಮಿತಿಯೊಳಗಿರಬೇಕು ಹಾಗೂ ಸಾಮಾನ್ಯ ವರ್ಗದಲ್ಲಿ ಆರ್ಯವೈಶ್ಯ ಸಮುದಾಯಕ್ಕೆ ಸೇರಿದವರಾಗಿದ್ದು, ಕರ್ನಾಟಕ ರಾಜ್ಯದಲ್ಲಿ ವಾಸಿಸುತ್ತಿರಬೇಕು. ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ನಮೂನೆ-ಜಿಯಲ್ಲಿ ಪಡೆದು(ಪ್ರಮಾಣ ಪತ್ರವು ಚಾಲ್ತಿಯಲ್ಲಿರಬೇಕು)ಸಲ್ಲಿಸಬೇಕು. ಅರ್ಜಿದಾರರು ತಮ್ಮ ಆಧಾರ್ ಸಂಖ್ಯೆಗೆ ತಮ್ಮ ಮೊಬೈಲ್ ಸಂಖ್ಯೆಯನ್ನು ಜೋಡಣೆ ಹಾಗೂ ತಮ್ಮ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಸೀಡ್ ಮಾಡಿಸಿರಬೇಕು. ಸಾಲ ಸೌಲಭ್ಯಕ್ಕೆ ಆಯ್ಕೆ ಮಾಡುವಾಗ ಮಹಿಳೆಯರಿಗೆ ಶೇ.33, ವಿಕಲಚೇತನರಿಗೆ ಶೇ.5 ಹಾಗೂ ತೃತೀಯ ಲಿಂಗಿಗಳಿಗೆ ಶೇ.5ರಷ್ಟು ಮೀಸಲಾತಿ ನೀಡಲಾಗುವುದು.

ಸಮಾಚಾರ ಸಣ್ಣದಲ್ಲ

ಅನ್ಯಾಯದ ವಿರುದ್ಧ ಧ್ವನಿ ಎತ್ತಿ: ನಂಜುಂಡಯ್ಯ

ಮದ್ದೂರು: ಪ್ರತಿ ಗ್ರಾಮಗಳಲ್ಲಿ ರೈತ ಸಂಘಟನೆಯನ್ನು ಹುಟ್ಟುಹಾಕಿ ಅನ್ಯಾಯದ ವಿರುದ್ಧ ಧ್ವನಿ ಎತ್ತುವ ಮೂಲಕ ರೈತರಿಗೆ ಹಾಗೂ ಸಾರ್ವಜನಿಕರಿಗೆ ನ್ಯಾಯ ಕೊಡಿಸುವ ನಿಟ್ಟಿನಲ್ಲಿ ನೂತನ ಸಂಘಟನೆ ಮುಂದಾಗಬೇಕೆಂದು ರೈತ ಸಂಘಟನೆಯ ಮುಖಂಡ ಕೀಳಘಟ್ಟ ನಂಜುಂಡಯ್ಯ ತಿಳಿಸಿದರು. ತಾಲೂಕಿನ ಕೊಪ್ಪ ಗ್ರಾಮದ ಸಂತೆ ಮೈದಾನದಲ್ಲಿ ನಡೆದ ರೈತ ಸಂಘಟನೆಯ ಕೊಪ್ಪ ವೃತ್ತ ಘಟಕದ ಪುನರ್‌ರಚನೆ ಕಮಿಟಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ನೂತನ ಪದಾಧಿಕಾರಿಗಳ ಆಯ್ಕೆ: ಕೊಪ್ಪ ಹಾಗೂ ಬೆಸಗರಹಳ್ಳಿ ವೃತ್ತ ಘಟಕಕ್ಕೆ ರೈತ ಸಂಘದ ಮುಖಂಡರಾದ ಮೂಡ್ಯ ಚನ್ನಪ್ಪ ಹಾಗೂ ಕೀಳಘಟ್ಟ ನಂಜುಂಡಯ್ಯ ನವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದ ವೇಳೆ ಈ ಕೆಳಕಂಡವರನ್ನು ನೂತನ ಪದಾಧಿಕಾರಿಗಳನ್ನಾಗಿ ಆಯ್ಕೆ ಮಾಡಲಾಯಿತು. ಎಚ್.ಡಿ.ನಿಂಗೇಗೌಡ (ಅಧ್ಯಕ್ಷ), ಗೂಳೂರು ನಿಂಗರಾಜು (ಉಪಾಧ್ಯಕ್ಷ), ಚಿಕ್ಕಲಿಂಗಯ್ಯ, ಉಮೇಶ್, ಅಪ್ಪಾಜಿ (ಪ್ರಧಾನ ಕಾರ್ಯದರ್ಶಿ), ಮಂಜುನಾಥ್ (ಸಂಘಟನಾ ಕಾರ್ಯದರ್ಶಿ), ಶಿವರಾಮು, ಪುಟ್ಟಸ್ವಾಮಿ, ಶಿವಲಿಂಗ (ಸಹ ಕಾರ್ಯದರ್ಶಿ), ಎಚ್.ಎನ್.ರಮೇಶ್ (ಖಜಾಂಚಿ), ತಿಮ್ಮೇಶ್ (ಸಂಚಾಲಕ), ಜಗದೀಶ್, ರಾಮಣ್ಣ, ಶಿವಲಿಂಗಯ್ಯ, ರಾಮಕೃಷ್ಣ, ಶಶಿ, ಉಮೇಶ್, ಯೋಗೇಶ್, ದೊಡ್ಡಮರಿಗೌಡ, ರಾಜೇಶ್, ಗಿರೀಶ್, ಕೃಷ್ಣ ಇತರರನ್ನು ಸದಸ್ಯರನ್ನಾಗಿ ಆಯ್ಕೆ ಮಾಡಲಾಯಿತು.ಈ ವೇಳೆ ರೈತ ಮುಖಂಡರಾದ ಸೋ.ಶಿ.ಪ್ರಕಾಶ್, ಪ್ರಭುಲಿಂಗಯ್ಯ, ಶಿವಲಿಂಗಯ್ಯ, ಮರಲಿಂಗಯ್ಯ, ಕೆ.ಜಿ.ಉಮೇಶ್ ಹಾಗೂ ಇತರರಿದ್ದರು.

ಸೌಲಭ್ಯ ಒದಗಿಸದಿದ್ದರೆ ಶಿಸ್ತು ಕ್ರಮ: ನಾಗ

ಪಿರಿಯಾಪಟ್ಟಣ: ರೋಗಿಗಳಿಗೆ ಸ್ವಚ್ಛವಾದ ಹೊದಿಕೆ ಮತ್ತು ಸೂಕ್ತ ಸರಕಾರದ ಸೌಲಭ್ಯಗಳನ್ನು ನೀಡದಿದ್ದಲ್ಲಿ ಅಂತಹವರ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಕೆಎಎಸ್ ಕಿರಿಯ ಶ್ರೇಣಿ ಮತ್ತು ತಾಲೂಕು ಉಸ್ತುವಾರಿ ಅಧಿಕಾರಿ ನಾಗ ಪ್ರಶಾಂತ್ ಪಿ.ಎನ್. ತಿಳಿಸಿದರು. ಪಿರಿಯಾಪಟ್ಟಣದ ತಾಲೂಕು ಸಾರ್ವಜನಿಕ ಆಸ್ಪತ್ರೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಆಸ್ಪತ್ರೆಯಲ್ಲಿ ರೋಗಿಗಳ ಹೊದಿಕೆ ಒಗೆಯುವ ಯಂತ್ರ ಕೆಟ್ಟು ನಿಂತಿದ್ದು ಶೀಘ್ರದಲ್ಲೇ ರಿಪೇರಿ ಮಾಡಿಸಬೇಕು, ಪ್ರತಿಯೊಬ್ಬ ವೈದ್ಯರು ಸಿಬ್ಬಂದಿಗಳು ಬಯೋಮೆಟ್ರಿಕ್ ಹಾಜರಾತಿಯನ್ನು ಕಡ್ಡಾಯವಾಗಿ ನೀಡಬೇಕು. ಆಸ್ಪತ್ರೆಯಲ್ಲಿ ಔಷಧಿ ವಿತರಣಾ ವಿಭಾಗ ಸೇರಿದಂತೆ ವಿವಿಧ ವಾರ್ಡ್‌ಗಳಲ್ಲಿ ಆಗಬೇಕಾದ ಬದಲಾವಣೆಗಳನ್ನು ಶೀಘ್ರದಲ್ಲೇ ಕೈಗೊಳ್ಳುವಂತೆ ತಾಲೂಕು ಸಾರ್ವಜನಿಕ ಆಸ್ಪತ್ರೆ ಆಡಳಿತ ಅಧಿಕಾರಿ ಡಾಕ್ಟರ್ ಅನಿಲ್ ಕುಮಾರ್ ಗೆ ತಿಳಿಸಿದರು. ಅಹವಾಲು ಸ್ವೀಕರಿಸಿ ಮಾತನಾಡಿದ ನಾಗಪ್ರಶಾಂತ್ ಈ ಬಗ್ಗೆ ಎಲ್ಲಾ ರೀತಿಯ ಪರಿಶೀಲನೆ ನಡೆಸಲಾಗುತ್ತಿದ್ದು ಆಸ್ಪತ್ರೆಯಲ್ಲಿ ಸೂಕ್ತ ಬದಲಾವಣೆ ತರುವ ನಿಟ್ಟಿನಲ್ಲಿ ತಾಲೂಕು ಆರೋಗ್ಯ ಅಧಿಕಾರಿ ಶ್ರೀನಿವಾಸ್, ಹಾಗೂ ಇತರೆ ಅಧಿಕಾರಿಗಳಿಗೆ ಸೂಕ್ತ ಮಾಹಿತಿ ಮತ್ತು ಮಾರ್ಗದರ್ಶನ ನೀಡಿದ್ದು ಸೂಕ್ತ ರೀತಿಯಲ್ಲಿ ಬದಲಾವಣೆ ಕಾಣದಿದ್ದರೆ ಬೇಜವಾಬ್ದಾರಿ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮಕ್ಕೆ ಕ್ರಮವಹಿಸಲಾಗುವುದು ಎಂದು ಎಚ್ಚರಿಕೆ ನೀಡಿದರು. ಈ ಸಂದರ್ಭದಲ್ಲಿ ಬಿಇಒ ರವಿಪ್ರಸನ್ನ, ಶಿರಸ್ತೇದಾರ್ ಶಕೀಲಾ ಬಾನು,ಆರ್ ಐ ಪಾಂಡು, ಗ್ರಾಮಲೆಕ್ಕಿಗ ಉಮೇಶ್ ದೇವುಲ್, ಸೇರಿದಂತೆ ಮತ್ತಿತರರು ಹಾಜರಿದ್ದರು.

ಅಬ್ದುಲ್ ಕಲಾಂ ಆಜಾದ್ ಕೊಡುಗೆ ಅಪಾರ: ಶಾಸಕ

ಚಾಮರಾಜನಗರ: ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಟಿಪ್ಪು ಸುಲ್ತಾನ್, ಮೌಲಾನಾ ಅಬ್ದುಲ್ ಕಲಾಂ ಆಜಾದ್ ಜಯಂತಿ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಪುಷ್ಪಾರ್ಚನೆ ಮಾಡಿದ. ಶಾಸಕ ಸಿ.ಪುಟ್ಟರಂಗಶೆಟ್ಟಿ ಮಾತನಾಡಿ, ಟಿಪ್ಪು ಸುಲ್ತಾನ್ ಅವರು ಅಪ್ಪಟ ದೇಶಪ್ರೇಮಿ ಯಾಗಿದ್ದರು. ಅವರು ತನ್ನ ಆಡಳಿತದ ಅವಧಿಯಲ್ಲಿ ಹೊಸ ನಾಣ್ಯ ವ್ಯವಸ್ಥೆ ಮತ್ತು ಮತ್ತು ಹೊಸ ಭೂಕಂದಾಯ ವ್ಯವಸ್ಥೆಯನ್ನು ಒಳಗೊಂಡಂತೆ ಆಡಳಿತಾತ್ಮಕ ಆವಿಷ್ಕಾರಗಳನ್ನು ಪರಿಚಯಿಸಿದರು. ಅಲ್ಲದೆ ಮೈಸೂರು ರೇಷ್ಮೆ ಉದ್ಯಮದ ಬೆಳವಣಿಗೆಯನ್ನು ಪ್ರಾರಂಭಿಸಿ ಒತ್ತು ನೀಡಿದ್ದರು ಎಂದರು. ಕಾರ್ಯಕ್ರಮದಲ್ಲಿ ಚೂಡಾಧ್ಯಕ್ಷ ಮಹಮ್ಮದ್, ಮಾಜಿ ಅಧ್ಯಕ್ಷ ಸೈಯದ್ ರಫೀ, ಅಸ್ಗರ್, ಅಲ್ಪಸಂಖ್ಯಾತ ಘಟಕ ಜಿಲ್ಲಾಧ್ಯಕ್ಷ ಅಫ್ಜಲ್ ಷರೀಫ್, ಉಪಾಧ್ಯಕ್ಷ ಇನಾಯತ್ ಪಾಷ, ಪ್ರಧಾನ ಕಾರ್ಯದರ್ಶಿ ಆಸೀಫ್ ಉಲ್ಲಾ, ಜಿಲ್ಲಾ ಉಪಾಧ್ಯಕ್ಷ ಬಿ.ಕೆ.ರವಿಕುಮಾರ್, ಪ್ರಧಾನ ಕಾರ್ಯದರ್ಶಿ ಚಿಕ್ಕಮಹದೇವು,ಜಿಲ್ಲಾ ವಕ್ತಾರ ಕೆರೆಹಳ್ಳಿ ನವೀನ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅರಕಲವಾಡಿ ಗುರುಸ್ವಾಮಿ,ಎಪಿಎಂಸಿ ಅಧ್ಯಕ್ಷ ಎಚ್.ಎನ್.ಮಹದೇವಸ್ವಾಮಿ, ತಾ.ಪಂ.ಮಾಜಿ ಸದಸ್ಯರಾದ ಮಹದೇವಶೆಟ್ಟಿ, ಕುಮಾರ್ ನಾಯಕ್, ಇಮ್ರಾನ್,ಎ.ಎ. ಅಬ್ಬಾಸ್, ನಗರಸಭಾ ಮಾಜಿ ಸದಸ್ಯ ಚೆಂಗುಮಣಿ, ಸಿದ್ದಿಕ್ ಉಲ್ಲಾ, ಅಫ್ಸರ್ ಷರೀಫ್, ಎಂ.ಶಿವಮೂರ್ತಿ, ಕರಿನಂಜನಪುರ ಸ್ವಾಮಿ,ಸೈಯದ್ ಮುಸಾಯಿಬ್, ಗ್ರಾ.ಪಂ.ಅಧ್ಯಕ್ಷ ರೂಪೇಶ್, ಮರಿಯಾಲದಹುಂಡಿ ಕುಮಾರ್ ಇತರರು ಹಾಜರಿದ್ದರು.

ಗೆಜೆಟಿಯರ್
ಪ್ರತಿ ಮಂಗಳವಾರ
ಇದು ಅನುಕ್ಷಣದ ಆ್ಯಪ್

{ ಡಾ.ಜಿ.ಪರಮೇಶ್ವರ್ } ಗೃಹ ಸಚಿವ

ಒಬ್ಬ ಪ್ರಧಾನಿ ಹೀಗೆ ಹೇಳುತ್ತಾರೆ ಎಂದರೆ ಹೇಗೆ?. ಇದು ಸತ್ಯಕ್ಕೆ ದೂರವಾಗಿರುವ ಮಾತು. 700 ಕೋಟಿ ರೂಪಾಯಿ ಹೇಗೆ ಮಹಾರಾಷ್ಟ್ರಕ್ಕೆ ಕಳಿಸಿದ್ದೇವೆ?. ಅವರು ಒಬ್ಬ ಜವಾಬ್ದಾರಿ ಸ್ಥಾನದಲ್ಲಿ ಇರೋರು. ಈ ರೀತಿ ಹೇಳಿಕೆಗಳನ್ನು ಕೊಡಬಾರದು.

ಭತ್ತ ಖರೀದಿಗೆ ಬೆಂಬಲ ಬೆಲೆ

ಮುಂಗಾರು ಋತುವಿನ ಕುರಿತು ಸಭೆ | ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ

ಯೋಜನೆಯ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ ಅವರು ಮಾತನಾಡಿದರು.

ಮೈಸೂರು: 2024-25ನೇ ಸಾಲಿನ ಬೆಂಬಲ ಬೆಲೆ ಯೋಜನೆಯ ಅಡಿಯಲ್ಲಿ ರೈತರಿಂದ ಎಫ್‌ಎಕ್ಯು ಗುಣಮಟ್ಟದ ರಾಗಿ, ಭತ್ತ, ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ಸಾಮಾನ್ಯ ಭತ್ತ ಕ್ವಿಂಟಾಲ್‌ಗೆ ರು.2300, ರಾಗಿ ಕ್ವಿಂಟಾಲ್ ಗೆ ರು. 4290 ಇದ್ದು, ನೋಂದಣಿ ಪ್ರಕ್ರಿಯೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿಯಲ್ಲಿ 2024-25ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಗೆ ಭತ್ತ ಮತ್ತು ರಾಗಿ ಖರೀದಿಸಲು ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿ ಯನ್ನು ಖರೀದಿ ಏಜೆನ್ಸಿ ಯನ್ನಾಗಿ ಸರಕಾರ ನೇಮಕ ಮಾಡಿದ್ದು ಖರೀದಿ ಪ್ರಕ್ರಿಯೆಯು ಇವರ ಮುಖಾಂತರ ನಡೆಯುತ್ತದೆ. ಸರಕಾರದ ಮಾನದಂಡಗಳ ಅನ್ವಯ ಎಫ್‌ಎಕ್ಯು ಗುಣಮಟ್ಟವನ್ನು ದೃಢೀಕರಿಸಲು ಕ್ರಮ ವಹಿಸಬೇಕು. ಖರೀದಿ ಏಜೆನ್ಸಿಯ ಹಿರಿಯ ಅಧಿಕಾರಿಗಳು ಮೇಲುಸ್ತುವಾರಿ ತಪಾಸಣೆ ಕೈಗೊಳ್ಳಬೇಕೆಂದು ತಿಳಿಸಿದರು.

ಸೂಕ್ತ ದಾಸ್ತಾನಿಗಾಗಿ ಭತ್ತ, ರಾಗಿ ಖರೀದಿ ಕೇಂದ್ರಗಳಲ್ಲಿ ಭತ್ತದ ಗುಣಮಟ್ಟವನ್ನು ಪರೀಕ್ಷಿಸಲು ಗ್ರೇಡರ್‌ಗಳನ್ನು ನಿಯೋಜಿಸುವಂತೆ ಹಾಗೂ ಖರೀದಿಸಿದ ಭತ್ತ, ರಾಗಿಯನ್ನು ಸೂಕ್ತ ರೀತಿಯಲ್ಲಿ ದಾಸ್ತಾನು ಮಾಡಲು ಅಗತ್ಯವಿರುವ ದಾಸ್ತಾನು ಕೇಂದ್ರಗಳನ್ನು ಗುರುತಿಸುವಂತೆ ಸೂಚನೆ ನೀಡಿದರು.

> **ಭತ್ತ, ರಾಗಿ ಖರೀದಿ ನೋಂದಣಿ ಪ್ರಾರಂಭವಾಗುವ ದಿನಾಂಕ ಕುರಿತು ಗ್ರಾಮೀಣ ಭಾಗದಲ್ಲಿ ರೈತರಿಗೆ ಹಾಗೂ ರೈತ ಮುಖಂಡರಿಗೆ ರೈತ ಸಂಪರ್ಕ ಕೇಂದ್ರಗಳ ಮೂಲಕ ಹೆಚ್ಚಿನ ಮಾಹಿತಿ ನೀಡುವಂತೆ ಹಾಗೂ ರೈತರ ನೊಂದಣಿ ಕೇಂದ್ರಗಳು ಹಾಗೂ ಭತ್ತ, ರಾಗಿ ಖರೀದಿ ಕೇಂದ್ರಗಳ ಕುರಿತು ವಿವರಗಳನ್ನು ನೀಡಿ.**
> -ಲಕ್ಷ್ಮಿಕಾಂತ ರೆಡ್ಡಿ, ಜಿಲ್ಲಾಧಿಕಾರಿ

ಭತ್ತ, ರಾಗಿ ಮಾರಾಟ ಮಾಡಬೇಕಾದ ರೈತರು ಈಗಾಗಲೇ ಫ್ರೂಟ್ಸ್ ತಂತ್ರಾಂಶದಲ್ಲಿ ನೋಂದಣಿಯಾಗಿರಬೇಕು. ಒಂದು ವೇಳೆ ರೈತರು ನೋಂದಣಿ ಮಾಡದಿದ್ದಲ್ಲಿ ಫ್ರೂಟ್ಸ್ ತಂತ್ರಾಂಶದಲ್ಲಿ ನೋಂದಣಿ ಮಾಡಿಕೊಂಡು ತಾವು ಬೆಳೆದ ಭತ್ತ, ರಾಗಿಯನ್ನು ಖರೀದಿ ಕೇಂದ್ರಗಳಲ್ಲಿ ಮಾರಾಟ ಮಾಡಬಹುದಾಗಿದೆ. ಖರೀದಿ ಕೇಂದ್ರಗಳಲ್ಲಿ ರೈತರಿಂದ ಖರೀದಿ ಮಾಡಿದ ಭತ್ತ, ರಾಗಿ ಮೊತ್ತವನ್ನು ನೇರವಾಗಿ ರೈತರ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗುತ್ತದೆ. ನೊಂದಣಿ ಕೇಂದ್ರದಲ್ಲಿ ರೈತರು ಫ್ರೂಟ್ ಐಡಿ, ಆಧಾರ್ ಸಂಖ್ಯೆಗೆ ಜೋಡಣೆಯಾದ ತಮ್ಮ ಬ್ಯಾಂಕ್ ಖಾತೆಯ ವಿವರಗಳನ್ನು ನೀಡಬೇಕಿದೆ ಎಂದು ತಿಳಿಸಿದರು.

ಸಭೆಯಲ್ಲಿ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯ ಜಂಟಿ ನಿರ್ದೇಶಕಿ ಕುಮುದಾ ಶರತ್, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ರವಿ, ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಯ ಅಧಿಕಾರಿಗಳು ಹಾಜರಿದ್ದರು.

ಸಮಯ ಪ್ರಜ್ಞೆ, ಉತ್ತಮ ಗುಣಗಳ ಅಳವಡಿಕೆ ಅಗತ್ಯ

ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಉಪಾಧ್ಯಕ್ಷೆ ಡಾ. ಪುಷ್ಪ ಅಮರ್ ನಾಥ್ ಮಾತನಾಡಿದರು.

ಮೈಸೂರು: ಐತಿಹಾಸಿಕ ಹಿನ್ನೆಲೆ ಹೊಂದಿರುವ ಚಿತ್ರದುರ್ಗದ ಕೋಟೆಯ ರಕ್ಷಣೆಗೆ ತನ್ನ ಪ್ರಾಣವನ್ನೇ ತ್ಯಾಗ ಮಾಡಿರುವ ವೀರರಾಣಿ ಒನಕೆ ಓಬವ್ವ ಅವರ ಸಮಯ ಪ್ರಜ್ಞೆ ಹಾಗೂ ಅವರ ಉತ್ತಮ ಗುಣಗಳನ್ನು ಪ್ರತಿಯೊಬ್ಬರು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಉಪಾಧ್ಯಕ್ಷೆ ಡಾ. ಪುಷ್ಪ ಅಮರ್ ನಾಥ್ ಹೇಳಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ನಗರದ ಕರ್ನಾಟಕ ಕಲಾಮಂದಿರ ಆವರಣದ ಕಿರುರಂಗಮಂದಿರದಲ್ಲಿ ನಡೆದ ವೀರವನಿತೆ ಒನಕೆ ಓಬವ್ವ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಒನಕೆ ಓಬವ್ವರ ಹೆಸರು ಚಿತ್ರದುರ್ಗದ ಇತಿಹಾಸದಲ್ಲಿ ಮರೆಯಲಾಗದು. ಅವರನ್ನು ಕರ್ನಾಟಕ ವೀರ ವನಿತೆಯರಾದ ಕಿತ್ತೂರು ಚೆನ್ನಮ್ಮ, ರಾಣಿ ಅಬ್ಬಕ್ಕರ ಸಾಲಿನಲ್ಲಿ ಒಬ್ಬರೆಂದು ಪರಿಗಣಿಸಲಾಗಿದೆ ಎಂದರು.

ವೀರರಾಣಿ ಓಬವ್ವ ಅವರಂತೆ ವೀರತನವನ್ನು ಮೈಗೂಡಿಸಿಕೊಳ್ಳಬೇಕು. ಅವರ ತತ್ವಾದರ್ಶ ಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು. ಚಿತ್ರದುರ್ಗದ ಚರಿತ್ರೆಯಲ್ಲೇ ಇಂದು ಓಬವ್ವನ ಸಾಹಸವನ್ನು ಮೆಲುಕು ಹಾಕಿ ಸ್ಮರಿಸುವ ದಿನವಾಗಿದೆ ಎಂದರು. ಕಾರ್ಯಕ್ರಮದಲ್ಲಿ ಮಾಜಿ ಮೇಯರ್ ಪುರುಷೋತ್ತಮ್, ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್, ಚಂದ್ರಶೇಖರ್, ಸಾರ್ವಜನಿಕ ಶಿಕ್ಷಣ ಇಲಾಖೆ ವಿಷಯ ಪರಿವೀಕ್ಷಕ ಪ್ರಸನ್ನ, ವಿವಿಧ ಶಾಲೆಯ ವಿದ್ಯಾರ್ಥಿಗಳು ಇದ್ದರು.

ಲಕ್ಕಿ ಡ್ರಾ: ಹೆಸರು ಘೋಷಣೆ

ಲಾಯಲ್ ವರ್ಲ್ಡ್ ಸೂಪರ್ ಮಾರ್ಕೆಟಿನ ನಿರ್ದೇಶಕ ಶ್ರೀಮೊಹಮ್ಮದ್ ಮಾತನಾಡಿದರು.

ಮೈಸೂರು: ಲಾಯಲ್ ವರ್ಲ್ಡ್‌ನ ದಸರಾ ಮತ್ತು ದೀಪಾವಳಿ ಹಬ್ಬದ ಧಮಾಕಾ ಲಕ್ಕಿ ಡ್ರಾ ವಿಜೇತರ ಹೆಸರು ಘೋಷಣೆಯಾಗಿದೆ.

ಲಾಯಲ್ ವರ್ಲ್ಡ್ ಸೂಪರ್ ಮಾರ್ಕೆಟ್ ವತಿಯಿಂದ ನಡೆಸಲಾದ ದಸರಾ ಮತ್ತು ದೀಪಾವಳಿ ಹಬ್ಬದ ಧಮಾಕಾ ಲಕ್ಕೀ ಡ್ರಾ ವನ್ನು ಹೆಮ್ಮೆಯಿಂದ ಘೋಷಿಸಿದೆ. ಲಾಯಲ್ ವರ್ಲ್ಡ್ ಗ್ರ್ಯಾಂಡ್ ಫೆಸ್ಟಿವ್ ಧಮಾಕಾ ಲಕೀ ಡ್ರಾ ವಿಜಯೋತ್ಸವವು ನವಂಬರ್ 9, 2024 ರಂದು, ಲಾಯಲ್ ವರ್ಲ್ಡ್ ಸೂಪರ್ ಮಾರ್ಕೆಟ್, ವಿ.ವಿ ಮೊಹಲ್ಲ, ಟೆಂಪಲ್ ರೋಡ್, ಮೈಸೂರು ನಲ್ಲಿ ಯಶಸ್ವಿಯಾಗಿ ಆಯೋಜಿಸಲಾಯಿತು. ಈ ಸಂದರ್ಬದಲ್ಲಿ ಗ್ರಾಹಕರ ಸಮ್ಮುಖದಲ್ಲಿ ಭಾಗ್ಯಶಾಲಿ ವಿಜೇತರಿಗೆ ಬಹುಮಾನಗಳನ್ನು ವಿತರಿಸಲಾಯಿತು.

ಗ್ರ್ಯಾಂಡ್ ಫೆಸ್ಟಿವ್ ಧಮಾಕಾ ಲಕೀ ಡ್ರಾ ಒಂದು ತಿಂಗಳ ಕಾಲ ನಡೆದ ಪ್ರಚಾರ ಕಾರ್ಯಕ್ರಮವಾಗಿದ್ದು, ಅಕ್ಟೋಬರ್ 1 ರಿಂದ ನವೆಂಬರ್ 3, 2024 ರವರೆಗೆ ಆಯೋಜಿಸಲಾಗಿತ್ತು. ಮೈಸೂರಿನ ಲಾಯಲ್ ವರ್ಲ್ಡ್ ನ ಏಳು ಸೂಪರ್ ಮಾರ್ಕೆಟುಗಳಲ್ಲಿ ಖರೀದಿಸಿದ ಎಲ್ಲಾ ಗ್ರಾಹಕರಿಗು, ಪ್ರತಿ 500 ರು. ಅಥವಾ ಅದಕ್ಕೂ ಹೆಚ್ಚಿನ ಖರೀದಿ ಮಾಡಿದವರು ಲಕ್ಕೀ ಡ್ರಾ ಕೊಡುಗೆಯ ಸ್ಪರ್ಧೆಗೆ ಅರ್ಹರಾಗಿದ್ದರು.

ನಮ್ಮ ಗ್ರಾಹಕರಿಗೆ ಹಬ್ಬದ ಸಂದರ್ಬದಲ್ಲಿ ಸಂಭ್ರಮದಿಂದ ಆಚರಿಸಿಕೊಳ್ಳಲು ನೀಡಲಾದ ಈ ಆಫರುಗಳು ವಿಶೇಷವಾಗಿತ್ತು'' ಎಂದು ಲಾಯಲ್ ವರ್ಲ್ಡ್ ಸೂಪರ್ ಮಾರ್ಕೆಟಿನ ನಿರ್ದೇಶಕ ಶ್ರೀಮೊಹಮ್ಮದ್ ತಿಳಿಸಿದ್ದಾರೆ.

ಈ ಕಾರ್ಯಕ್ರಮಕ್ಕೆ ಅದ್ಭುತ ಸ್ಪಂದನೆಗೆ ಸಿಕ್ಕಿದ್ದು, ಆದೃಷ್ಟ ಶಾಲಿ ಗ್ರಾಹಕರು ಬಹುಮಾನಗಳನ್ನು ತಮ್ಮದಾಗಿಸಿಕೊಂಡರು.

ಕನ್ನಡ ಜ್ಯೋತಿ ರಥಕ್ಕೆ ಮೂರ್ನಾಡಿನಲ್ಲಿ ಸ್ವಾಗತ

ಕನ್ನಡ ಜ್ಯೋತಿ ರಥವನ್ನು ವಾದ್ಯಗೋಷ್ಠಿಗಳೊಂದಿಗೆ ಬರಮಾಡಿಕೊಂಡು ಗೌರವ ಅರ್ಪಿಸಿದರು.

ಮಡಿಕೇರಿ: ಅಖಿಲ ಭಾರತ 87ನೇ ಕನ್ನಡ ಸಾಹಿತ್ಯ ಸಮ್ಮೇಳನದ ಪ್ರಯುಕ್ತ ರಾಜ್ಯವ್ಯಾಪಿ ಸಂಚರಿಸುತ್ತಿರುವ ಕನ್ನಡ ಜ್ಯೋತಿ ರಥಕ್ಕೆ ಮೂರ್ನಾಡಿನಲ್ಲಿ ಅದ್ದೂರಿ ಸ್ವಾಗತ ದೊರೆಯಿತು.

ಮೂರ್ನಾಡು ಹೋಬಳಿ ಕನ್ನಡ ಸಾಹಿತ್ಯ ಪರಿಷತ್ತು, ಮೂರ್ನಾಡು ಗ್ರಾಮ ಪಂಚಾಯಿತಿ, ಕಂದಾಯ ಇಲಾಖೆ, ಟೈಲರ್ ಅಸೋಸಿಯೇಷನ್ ಸದಸ್ಯರು, ಸರಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲಾ ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಸಾರ್ವಜನಿಕರು ಕನ್ನಡ ರಥವನ್ನು ಕೊಂಡಂಗೇರಿ ರಸ್ತೆಯಿಂದ ಬಸ್ ನಿಲ್ದಾಣದವರೆಗೆ ಪೂರ್ಣಕುಂಭ ಕಳಸ ಮತ್ತು ವಾದ್ಯಗೋಷ್ಠಿಗಳೊಂದಿಗೆ ಅದ್ದೂರಿಯಾಗಿ ಬರಮಾಡಿಕೊಂಡು ಗೌರವ ಅರ್ಪಿಸಿದರು.

ಪಂಚಾಯಿತಿ ಸದಸ್ಯರಾದ ಮುಂಡಂಡ ವಿಜಯಲಕ್ಷ್ಮಿ ಅವರ ನೇತೃತ್ವದಲ್ಲಿ ತಾಯಿ ಭುವನೇಶ್ವರಿಗೆ ಪೂಜೆಯನ್ನು ನೆರವೇರಿಸಲಾಯಿತು.

ಮೂರ್ನಾಡು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಈರಮಂಡ ಹರಿಣಿ ವಿಜಯ್, ಮೂರ್ನಾಡು ಗ್ರಾಮ ಪಂಚಾಯಿತಿ ಅಧ್ಯಕ್ಷ ಕುಶನ್ ರೈ, ಪರಿಷತ್ತಿನ ಸಂಘಟನಾ ಕಾರ್ಯದರ್ಶಿ ಜಾಶಿರ್ ಮತ್ತಿತರರು ಭುವನೇಶ್ವರಿಗೆ ಮಾಲಾರ್ಪಣೆ ಮಾಡಿದರು. ನಂತರ ಮೂರ್ನಾಡು ಸರಕಾರಿ ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳು ಕನ್ನಡನಾಡು ನುಡಿಯ ಕುರಿತು ನೃತ್ಯ ಪ್ರದರ್ಶಿಸಿದರು.

ಮಂಡ್ಯದಲ್ಲಿ ನಡೆಯುವ ಅಖಿಲ ಭಾರತ 87ನೇ ಕನ್ನಡ ಸಾಹಿತ್ಯ ಸಮ್ಮೇಳನ ಯಶಸ್ವಿಯಾಗಲಿ ಎಂದು ಶುಭ ಹಾರೈಸಿದರು.

> **ಶ್ರೀಮಂತ ಭಾಷೆ ಕನ್ನಡದ ಬಗ್ಗೆ ಪ್ರತಿಯೊಬ್ಬರಲ್ಲೂ ಅಭಿಮಾನ ಮೂಡಬೇಕು. ಮಕ್ಕಳಲ್ಲಿ ಕನ್ನಡ ಪ್ರೇಮವನ್ನು ಬೆಳೆಸಬೇಕು, ಕರ್ನಾಟಕ ಮಾತ್ರವಲ್ಲದೆ ದೇಶ ವಿದೇಶಗಳಲ್ಲೂ ಕನ್ನಡದ ಕೀರ್ತಿ ಪತಾಕೆ ಹಾರಾಡುವಂತೆ ಮಾಡಬೇಕು.**
> ಹರಿಣಿ ವಿಜಯ್, ಪರಿಷತ್ತಿನ ಅಧ್ಯಕ್ಷೆ

ಕೊಡಗು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕೇಶವ ಕಾಮತ್, ಪರಿಷತ್ತಿನ ಅಧ್ಯಕ್ಷೆ ಹರಿಣಿ ವಿಜಯ್, ಮಡಿಕೇರಿ ತಾಲೂಕು ಅಧ್ಯಕ್ಷೆ ಕಡ್ಲೇರ ತುಳಸಿ ಮೋಹನ್, ನಾಪೋಕ್ಲು ಹೋಬಳಿ ಅಧ್ಯಕ್ಷ ನೆರವಂಡ ಉಮೇಶ್, ಪದಾಧಿಕಾರಿಗಳಾದ ಮುನೀರ್, ಪುಷ್ಪ, ವಿಂದ್ಯ ದೇವಯ್ಯ, ಸದಸ್ಯ ಈರಮಂಡ ವಿಜಯ್ ಉತ್ತಯ್ಯ, ಗ್ರಾಮ ಪಂಚಾಯಿತಿ ಉಪಾಧ್ಯಕ್ಷೆ ರೇಖಾ ಬಿ.ಎಸ್, ಸದಸ್ಯರಾದ ಈರ ಸುಬ್ಬಯ್ಯ, ಸುಂದರಿ ಬಿ.ಎಸ್, ರೀಟಾ ಪಿ.ಎಸ್, ಪುಷ್ಪ ಎಂ.ಎಂ, ಮೀನಾಕ್ಷಿ ದೇವಯ್ಯ.

ಅಭಿವೃದ್ಧಿ ಅಧಿಕಾರಿ ಚಂದ್ರಮೌಳಿ, ಮಡಿಕೇರಿಯ ಕಂದಾಯ ಪರಿವೀಕ್ಷಕ ಚಂದ್ರಪ್ರಸಾದ್, ಗ್ರಾಮಾಧಿಕಾರಿ ಅಕ್ಷತಾ ಬಿ.ಶೆಟ್ಟಿ, ಮೂರ್ನಾಡು ಪೊಲೀಸ್ ಉಪಠಾಣೆಯ ಸಹಾಯಕ ಉಪನಿರೀಕ್ಷಕ ಶ್ರೀನಿವಾಸ್, ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯಿನಿ ಪುಷ್ಪಾವತಿ, ಪ್ರೌಢಶಾಲೆಯ ಶಿಕ್ಷಕರಾದ ಲೀನಾ, ಕವಿಯತ್ರಿ ಕೆ.ಜಿ.ರಮ್ಯ, ಯಶೋಧ, ಅಂಗನವಾಡಿ ಶಿಕ್ಷಕರು, ಕಾರ್ಯಕರ್ತರು ವಿವಿಧ ಸಂಘ ಸಂಸ್ಥೆಗಳ ಮುಖಂಡರು ಹಾಜರಿದ್ದರು. ಮೂರ್ನಾಡು ಹೋಬಳಿ ಕಸಾಪ ಗೌರವ ಕಾರ್ಯದರ್ಶಿ ಕಟ್ಟೆಮನೆ ಮಹಾಲಕ್ಷ್ಮಿ ಸ್ವಾಗತಿಸಿ ವಂದಿಸಿದರು.

ಕಾಂಗ್ರೆಸ್‌ನಿಂದ ಚಂದ್ರಕಲಾ ನಾಮಪತ್ರ

ಕಾಂಗ್ರೆಸ್ ಅಭ್ಯರ್ಥಿಯಾಗಿ ಚಂದ್ರಕಲಾ ನಾಮಪತ್ರ ಸಲ್ಲಿಸಿದ ನಂತರ ಕಾರ್ಯಕರ್ತರ ಜೊತೆ ವಿಜಯದ ಸಂಕೇತ ತಿಳಿಸಿದರು.

ಸರಗೂರು: ಪಟ್ಟಣ ಪಂಚಾಯಿತಿಯ 4ನೇ ವಾರ್ಡ್‌ನ ಸದಸ್ಯ ಎಸ್.ಎಲ್.ರಾಜಣ್ಣ ಅವರ ನಿಧನರಾದ ಹಿನ್ನಲೆಯಲ್ಲಿ ತೆರವಾದ ಸದಸ್ಯ ಸ್ಥಾನಕ್ಕೆ ಚುನಾವಣಾ ಆಯೋಗ ಉಪಚುನಾವಣೆ ಘೋಷಿಸಿದ್ದು ನವೆಂಬರ್ 23ಕ್ಕೆ ಮತದಾನ ನಡೆಯಲಿದೆ.

ಎಸ್.ಎಲ್.ರಾಜಣ್ಣ ಅವರು ಪ್ರತಿನಿಧಿಸಿದ್ದ ಪರಿಶಿಷ್ಟ ಜಾತಿಗೆ ಮೀಸಲಾದ ವಾರ್ಡ್ ನಂ 4 ಕ್ಕೆ ಚುನಾವಣಾ ಆಯೋಗ ಉಪಚುನಾವಣೆ ದಿನಾಂಕ ಪ್ರಕಟಿಸಿದ್ದು ದಿ.ಎಸ್.ಎಲ್.ರಾಜಣ್ಣ ನವರ ಪತ್ನಿ ಚಂದ್ರಕಲಾ ಇಂದು ಕಾಂಗ್ರೆಸ್ ಅಭ್ಯರ್ಥಿಯಾಗಿ ಪಟ್ಟಣ ಪಂಚಾಯಿತಿ ಚುನಾವಣಾಧಿಕಾರಿಗಳಿಗೆ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ಜೊತೆಗೂಡಿ ನಾಮಪತ್ರ ಸಲ್ಲಿಸಿದರು. ನವೆಂಬರ್ 11ಕ್ಕೆ ನಾಮಪತ್ರ ಸಲ್ಲಿಸಲು ಕೊನೆಯ ದಿನಾಂಕವಾಗಿದ್ದು ನಾಮಪತ್ರ ಸಲ್ಲಿಕೆ ಮುಗಿದಿದ್ದು, ನವೆಂಬರ್ 12 ಪರಿಸೀಲನೆ ನವೆಂಬರ್ 14 ನಾಮಪತ್ರ ಹಿಂಪಡೆಯಲು ಕೊನೆಯ ದಿನಾಂಕವಾಗಿದೆ.

ನಾಮಪತ್ರಸಲ್ಲಿಕೆ ಸಂದರ್ಭದಲ್ಲಿ ಸರಗೂರು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮನುಗನಹಳ್ಳಿ ಮಾದಪ್ಪ, ಟೌನ್ ಅಧ್ಯಕ್ಷ ಎಸ್.ಎನ್.ನಾಗರಾಜು, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಪಿ.ರವಿ, ಅಕ್ರಮ ಸಕ್ರಮ ಸಮಿತಿ ಸದಸ್ಯ ಶಿವಶಂಕರ್, ಚನ್ನಿಪುರ ಚಲುವರಾಜು, ಆದಿಕರ್ನಾಟಕ ಮಹಾಸಭಾ ತಾಲೂಕು ಅಧ್ಯಕ್ಷ ಶಿವಣ್ಣ, ಎಪಿ.ಎಂ.ಸಿ. ಮಾಜಿ ಅಧ್ಯಕ್ಷ ದೇವಲಾಪುರ ಸಿದ್ದರಾಜು, ಪಟ್ಟಣ ಪಂಚಾಯಿತಿ ಸದಸ್ಯರಾದ ಶ್ರೀನಿವಾಸ್, ಚಲುವಕೃಷ್ಣ, ಆದಿಕರ್ನಾಟಕ ಸಮಾಜದ ಯಜಮಾನರಾದ ಭೋಗಯ್ಯ, ರಂಗಯ್ಯ, ಮಾಜಿ ಯಜಮಾನರಾದ ಭೈರಲಿಂಗಯ್ಯ, ಗೋಪಾಲ್, ಮುಖಂಡರಾದ ಭೀಮಯ್ಯ, ಭೋಗಪ್ಪ, ಮಾದೇವ್, ಲೋಡರ್ಸ್ ಸಂಘದ ಮಾಜಿ ಅಧ್ಯಕ್ಷ ಗೋಪಾಲಯ್ಯ, ಬಿಲ್ಲಯ್ಯ, ದೊಡ್ಡಭೈರ, ಚನ್ನಯ್ಯ, ಎಸ್.ಜಿ.ಕೃಷ್ಣಯ್ಯ ಸರಗೂರ, ಮೊಬೈಲ್ ರಾಜು, ಚಿಕ್ಕಚನ್ನ, ರಮೇಶ್, ರಾಘವೇಂದ್ರ, ದೇವಲಾಪುರ ಮಹೇಶ್, ಸಿದ್ದಲಿಂಗಪ್ಪ, ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಭಾಗವಹಿಸಿದ್ದರು.

> **ಇಂದು ಚಂದ್ರಕಲಾ ಒಬ್ಬರೆ ನಾಮಪತ್ರ ಸಲ್ಲಿಸಿರುತ್ತಾರೆ, ಬೇರೆ ಯಾರು ನಾಮತ್ರ ಸಲ್ಲಿಸದ ಕಾರಣ ಚುನಾವಣೆ ಪ್ರಕ್ರಿಯೆ ದಿನಾಂಕ ಮುಗಿದ ನಂತರ ನವೆಂಬರ್ 23 ರಂದು ಪಟ್ಟಣ ಪಂಚಾಯಿತಿ ಕಚೇರಿಯಲ್ಲಿ ಅಭ್ಯರ್ಥಿ ಘೋಷಣೆ ಮಾಡಲಾಗುವುದು.**
> ಜಿ.ಪುರುಷೋತ್ತಮ್, ಚುನಾವಣಾಧಿಕಾರಿ

ಧನುಷ್ಕೋಟಿ ಜಲಪಾತೋತ್ಸವ

ಮೈಸೂರು: ಈ ಬಾರಿ ರಾಜ್ಯದಲ್ಲಿ ಉತ್ತಮವಾಗಿ ಮಳೆ ಆಗಿದ್ದು ಡಿಸೆಂಬರ್ 7 ಹಾಗೂ 8 ರಂದು ಚುಂಚನಕಟ್ಟೆ ಗ್ರಾಮದಲ್ಲಿರುವ ಧನುಷ್ಕೊ?ಟಿ ಕಾವೇರಿ ಜಲಪಾತ ಕಾರ್ಯಕ್ರಮ ಮಾಡಲಾಗುವುದು ಎಂದು ಕೆ.ಆರ್. ನಗರ ವಿಧಾನಸಭಾ ಕ್ಷೇತ್ರದ ಶಾಸಕ ಡಿ. ರವಿಶಂಕರ್ ತಿಳಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಚುಂಚನಕಟ್ಟೆ ಜಲಪಾತೋತ್ಸವ ಆಚರಣೆ ಸಂಬಂಧ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಳಾದ ಕೆ.ಎಂ.ಗಾಯತ್ರಿ, ಹುಣಸೂರು ಉಪ ವಿಭಾಗಾಧಿಕಾರಿ ವಿಜಯ್ ಕುಮಾರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಡಿ.ಎಂ.ಸುದರ್ಶನ್, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಪ್ರಭುಸ್ವಾಮಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಕಾರ್ಮಿಕರ ಅಭಿವೃದ್ಧಿಯೇ ಸರಕಾರದ ಗುರಿ

ವಿವಿಧ ಕಾರ್ಮಿಕರುಗಳಿಗೆ ಟ್ಯೂಲ್ ಕಿಟ್ ಅನ್ನು ಆಶ್ರಯ ಸಮಿತಿ ಅಧ್ಯಕ್ಷ ನಿತಿನ್ ವೆಂಕಟೇಶ್ ಅವರು ವಿತರಿಸಿದರು.

ಪಿರಿಯಾಪಟ್ಟಣ: ಕಟ್ಟಡ ಕಾರ್ಮಿಕರ ಅಭಿವೃದ್ಧಿಗಾಗಿ ಸರಕಾರ ಹಲವು ಕಾರ್ಯಕ್ರಮಗಳನ್ನು ನೀಡುತ್ತಿದ್ದು ಪ್ರತಿಯೊಬ್ಬರೂ ಸದುಪಯೋಗ ಪಡಿಸಿಕೊಂಡು ಆರ್ಥಿಕವಾಗಿ ಸಬಲರಾಗಬೇಕೆಂದು ತಾಲೂಕು ಆಶ್ರಯ ಸಮಿತಿ ಅಧ್ಯಕ್ಷ ನಿತಿನ್ ವೆಂಕಟೇಶ್ ತಿಳಿಸಿದ್ದರು.

ಪಟ್ಟಣದ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ಕಾರ್ಮಿಕ ಇಲಾಖೆಯ ವತಿಯಿಂದ ವಿವಿಧ ಕಾರ್ಮಿಕರುಗಳಿಗೆ ಟ್ಯೂಲ್ ಕಿಟ್ ವಿತರಿಸಿ ಮಾತನಾಡಿದರು.

ಕಾರ್ಮಿಕರ ಕಲ್ಯಾಣ ಅಭಿವೃದ್ಧಿಯೇ ಸರಕಾರದ ಮೂಲ ಗುರಿಯಾಗಿದ್ದು ಯೋಜನೆಗಳನ್ನು ಪ್ರತಿಯೊಬ್ಬರು ಸದುಪಯೋಗಪಡಿಸಿಕೊಳ್ಳಬೇಕು ಕಾರ್ಮಿಕರ ಕ್ಷೇಮಾಭಿವೃದ್ಧಿಗಾಗಿ ಕೇಂದ್ರ, ಮತ್ತು ರಾಜ್ಯ ಸರಕಾರಗಳು ಕಾರ್ಮಿಕ ಇಲಾಖೆಗೆ ಅನೇಕ ಯೋಜನೆಗಳಿಗೆ ಅನುದಾನವನ್ನು ನೀಡುತ್ತಿದ್ದು ಇವುಗಳ ಬಗ್ಗೆ ಜಾಗೃತಿ ಹೊಂದಿ ಪ್ರತಿಯೊಬ್ಬರು ಅನುದಾನವನ್ನು ಬಳಸಿಕೊಳ್ಳುವುದರಲ್ಲಿ ಮುಂದಾಗಬೇಕು. ಕಾರ್ಮಿಕರು ಸರಕಾರಕ್ಕೆ ನೀಡುವ ತೆರಿಗೆ ಹಣದಿಂದಲೇ ಅನುದಾನವು ಬಿಡುಗಡೆಯಾಗುತ್ತಿದೆ ಇವುಗಳ ಬಗ್ಗೆ ಜಾಗೃತಿಯನ್ನು ಹೊಂದಬೇಕೆಂದರು.

ಜಿಲ್ಲಾ ಕಾರ್ಮಿಕ ಅಧಿಕಾರಿ ಚೇತನ್ ಕುಮಾರ್ ಮಾತನಾಡಿ ಕಾರ್ಮಿಕ ಇಲಾಖೆ ವತಿಯಿಂದ ನೀಡುವ ಯೋಜನೆಗಳನ್ನು ಪ್ರತಿಯೊಬ್ಬರು ಬಳಸಿಕೊಳ್ಳಬೇಕು ವಿವಾಹ,ಶೈಕ್ಷಣಿಕ ಮತ್ತು ಇತರೆ ಸಂಕಷ್ಟಗಳಿಗಾಗಿ ಅನುದಾನವನ್ನು ಕಾರ್ಮಿಕ ಇಲಾಖೆಯ ವತಿಯಿಂದ ವಿವಿಧ ನೋಂದಾಯಿತ ಕಾರ್ಮಿಕರಿಗೆ ಉಚಿತವಾಗಿ ಯೋಜನೆಗಳನ್ನು ನೀಡುತ್ತಿದ್ದು ಇವರುಗಳಿಗೆ ವಿವಿಧ ಸೌಲಭ್ಯಗಳನ್ನು ಕೂಡ ನೀಡಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಸುನಿಲ್ ಕುಮಾರ್ , ತಾಲೂಕು ಕಾರ್ಮಿಕ ನಿರೀಕ್ಷಕ ಅಧಿಕಾರಿ ಸಿ.ಎಲ್ ಮಂಜುನಾಥ್ , ಕೆಆರ್ ನಗರ ತಾಲೂಕು ಕಾರ್ಮಿಕ ನಿರೀಕ್ಷಕ ಎಚ್ ಕೆ ಗೋವಿಂದರಾಜು ಪಿರಿಯಾಪಟ್ಟಣ ತಾಲೂಕು ಭೂ ನ್ಯಾಯ ಮಂಡಳಿ ಸದಸ್ಯ ಪುಟ್ಟರಾಜು ಸೇರಿದಂತೆ ಕಾರ್ಮಿಕ ಇಲಾಖೆಯ ಅಧಿಕಾರಿಗಳು ಮತ್ತು ಕಟ್ಟಡ ಕಾರ್ಮಿಕರು ಹಾಜರಿದ್ದರು.

> **ಕೋವಿಡ್ ಸಂಕಷ್ಟದ ನಂತರ ಕಟ್ಟಡ ಕಾರ್ಮಿಕರಿಗೆ ಮಂಡಳಿಯ ಮಹತ್ವ ಅರ್ಥವಾಗಿದೆ.2007 ರಲ್ಲಿ ಮಂಡಳಿ ರಚನೆಯಾಗಿದರು 2010 ರಿಂದ ಮಂಡಳಿಗೆ ಹೆಚ್ಚು ಹೆಚ್ಚು ಆದ್ಯತೆ ಪಡೆಯುತ್ತಿದೆ. ಫಲಾನುಭವಿಗಳಿಗೆ ಇಲಾಖೆಯು ನೇರವಾಗಿ ಫಲಾನುಭವಿಗಳ ಖಾತೆಗೆ ಜಮೆ ಮಾಡುತ್ತದೆ ಇದರಿಂದ ಯಾವುದೇ ಕಾರ್ಮಿಕರಿಗೆ ಮಧ್ಯವರ್ತಿಗಳ ಹಾವಳಿ ಇರುವುದಿಲ್ಲ ಆದ್ದರಿಂದಲೇ ನಮ್ಮ ಇಲಾಖೆಯನ್ನು ಸ್ನೇಹಮಯಿ ಕಚೇರಿಯಂದು ಕರೆಯಲಾಗುತ್ತದೆ.**
> -ಚೇತನ್ ಕುಮಾರ್, ಜಿಲ್ಲಾ ಕಾರ್ಮಿಕ ಅಧಿಕಾರಿ

ಉಪಚುನಾವಣೆ: ಮದ್ಯ ಮಾರಾಟ ನಿಷೇಧ

ಮಂಡ್ಯ: ಪಕ್ಕದ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರಕ್ಕೆ ನವೆಂಬರ್ 13ರಂದು ಉಪಚುನಾವಣೆಯ ಮತದಾನ ನಡೆಯುವ ಹಿನ್ನಲೆಯಲ್ಲಿ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಅಕ್ಕಪಕ್ಕದ ತಾಲೂಕುಗಳಾದ ಮಂಡ್ಯ ಜಿಲ್ಲೆಯ ಮದ್ದೂರು ಹಾಗೂ ಮಳವಳ್ಳಿ ತಾಲೂಕಿನ ಐದು ಕಿಲೋ ಮೀಟರ್ ವ್ಯಾಪ್ತಿಯಲ್ಲಿ ಮದ್ಯ ಮಾರಾಟ ಹಾಗೂ ಸಾಗಾಣಿಕೆಯನ್ನು ನಿಷೇಧಗೊಳಿಸಲಾಗಿದೆ. ನವೆಂಬರ್ 11ರ ಸಂಜೆ 5ಗಂಟೆಯಿಂದ ಮತದಾನ ನಡೆಯುವ ನವೆಂಬರ್ 13ರ ಮಧ್ಯರಾತ್ರಿ 12 ಗಂಟೆಯವರೆಗೆ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರಕ್ಕೆ ಹೊಂದಿಕೊಂಡಂತಿರುವ ಮದ್ದೂರು ಹಾಗೂ ಮಳವಳ್ಳಿ ತಾಲೂಕಿನ ಸುತ್ತಮುತ್ತಲ ಐದು ಕಿಮೀ ವ್ಯಾಪ್ತಿಯಲ್ಲಿ ಮದ್ಯ ಮಾರಾಟ ಹಾಗೂ ಸಾಗಾಣಿಕೆಯನ್ನು ನಿರ್ಬಂಧಗೊಳಿಸಿ ಡಿಸಿ ಡಾ.ಕುಮಾರ ಆದೇಶ ಹೊರಡಿಸಿದ್ದಾರೆ.



ಸಮಾಚಾರ ಸಣ್ಣದಲ್ಲ

ಗುಂಡು ತಗುಲಿ ಯುವಕ ಸಾವು

ಬೆಳಗಾವಿ: ಖಾನಾಪುರ ಅರಣ್ಯ ಪ್ರದೇಶದಲ್ಲಿ ನವಿಲುಗಳನ್ನು ಬೇಟೆಯಾಡುವ ಸಂದರ್ಭದಲ್ಲಿ ಯುವಕನೋರ್ವನಿಗೆ ಗುಂಡು ತಗುಲಿ ಸಾವಣಪ್ಪಿರುವ ಘಟನೆ ಪೊಲೀಸ್ ಮೂಲಗಳಿಗೆ ಸ್ಪಷ್ಟಗೊಂಡಿದೆ. ಭಾನುವಾರ ತಡರಾತ್ರಿ ಖಾನಾಪುರ ತಾಲೂಕಿನ ಹಲಸಿ - ಬೇಕವಾಡ ರಸ್ತೆಯ ನರಸೇವಾಡಿ ಬ್ರಿಡ್ಜ್ ಬಳಿ ಅಲ್ತಾಫ ಗೌಸ್ ಮಕಾಂದರ್ (27) ಎಂಬಾತ ಗುಂಡು ತಗುಲಿ ಸಾವಣಪ್ಪಿದ್ದ. ಮೇಲ್ನೋಟಕ್ಕೆ ಇದು ಗುಂಡಿನ ಚಕಮಕಿ ಎಂದೇ ಭಾವಿಸಲಾಗಿತ್ತಾದರು ಪೊಲೀಸ್ ತನಿಖೆಯಿಂದ ಪ್ರಕರಣ ಇನ್ನೊಂದು ಆಯಾಮ ಬೆಳಕಿಗೆ ಬಂದಿದೆ. ನವಿಲು ಬೇಟೆಯಾಡುವ ಸಂದರ್ಭದಲ್ಲಿ ಗುಂಡು ತಗುಲಿ ಯುವಕ ಸಾವನಪ್ಪಿದ್ದು ಘಟನಾ ಸ್ಥಳದಲ್ಲಿ ನವಿಲಿನ ಮಾಂಸ ಪತ್ತೆಯಾಗಿದ್ದು ವನ್ಯಜೀವಿ ಸಂರಕ್ಷಣಾ ಕಾಯ್ದೆಯಡಿ ಹಾಗೂ ಕೊಲೆ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಲಾಗುತ್ತಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಭೀಮಾಶಂಕರ ಗುಳೆದ್ ಮಾಹಿತಿ ನೀಡಿದ್ದಾರೆ.

ತನ್ನೆಲ್ಲ ಪ್ರವಾಸಗಳಿಗೆ 9% ರಿಯಾಯತಿ ಘೋಷಣೆ | ಈ ಕೊಡುಗೆ ಸೀಮಿತ ಅವಧಿಗೆ ಮೀಸಲು

ಅಡಿಗಾಸ್ ಸಂಸ್ಥೆಯ ಭರ್ಜರಿ ಕೊಡುಗೆ

ಬೆಂಗಳೂರು: ಪ್ರವಾಸೋದ್ಯಮ ಕ್ಷೇತ್ರದಲ್ಲಿ ತನ್ನದೇ ಆದ ಛಾಪನ್ನು ಮೂಡಿಸಿರುವ ಅಡಿಗಾಸ್ ಸಂಸ್ಥೆ 3 ದಶಕಗಳನ್ನು ಯಶಸ್ವಿಯಾಗಿ ಪೂರೈಸಿದೆ. ಇದರ ಪ್ರಯುಕ್ತ ಹಾಗೂ ಕರ್ನಾಟಕ ರಾಜ್ಯೋತ್ಸವದ ಪ್ರಯುಕ್ತ ತನ್ನೆಲ್ಲ ಪ್ರವಾಸಗಳಿಗೆ 9% ರಿಯಾಯತಿಯನ್ನು ಘೋಷಿಸಿದೆ. ಸಂಸ್ಥೆಯ ಮಾಲೀಕರಾದ ಶ್ರೀ ಕೆ.ನಾಗರಾಜ ಅಡಿಗರು ಮಾತನಾಡಿ , ಈ ಕೊಡುಗೆ ಸೀಮಿತ ಅವಧಿಗೆ ಮೀಸಲಾಗಿದ್ದು ಸಂಸ್ಥೆಯ ಯಾವುದೇ ಪ್ರವಾಸಕ್ಕೆ ಮುಂಗಡ ಬುಕಿಂಗ್ ಮಾಡಿದವರಿಗೆ ಈ ಕೊಡುಗೆ ಅನ್ವಯಿಸಲಿದೆ.

ನಿಖರ ಮಾಹಿತಿ, ನಿಗದಿತ ಸೌಲಭ್ಯ: ನೂತನ ಪ್ರಯೋಗಗಳಿಗೆ ಸದಾ ಮುಕ್ತವಾಗಿರುವ ಅಡಿಗಾಸ್ ಹೊಸ ಹೊಸ ಪ್ರವಾಸಿ ಯೋಜನೆಗಳನ್ನು ಪ್ರವಾಸಿಗರಿಗೆ ಪರಿಚಯಿಸುತ್ತಲೇ ಬಂದಿದೆ. ಅಂತೆಯೇ ಈ ಬಾರಿ Domestic Fixed Departures ಎನ್ನುವ ಯೋಜನೆಯಡಿ ಭಾರತದಾದ್ಯಂತ ಪ್ರಸಿದ್ಧ ಪ್ರವಾಸಿ ತಾಣಗಳಿಗೆ ಪ್ರತಿಷ್ಠಿತ ಪಂಚತಾರ ಹೋಟೆಲ್ ಹಾಗೂ ರೆಸಾರ್ಟ್ ಗಳಲ್ಲಿ ವಸತಿ, ಐಷಾರಾಮಿ ವಾಹನಗಳಲ್ಲಿ ಪ್ರಯಾಣ, ನಿಖರ ಮಾಹಿತಿಯನ್ನೊಳಗೊಂಡ ಕಾರ್ಯಕ್ರಮ ಪಟ್ಟಿ, ಮುಂಚಿತವಾಗಿ ಕಾಯ್ದಿರಿಸಿದ ಸುಸಜ್ಜಿತ ಹೋಟೆಲ್ ಗಳಲ್ಲಿ ಉಟೋಪಹಾರ, ಸ್ಥಳೀಯ ಗೈಡ್ ಗಳ ಸೌಲಭ್ಯ ವಿದ್ದು, ನಿಮ್ಮ ಪ್ರವಾಸವು ಸುಖಕರವಾಗಿರುತ್ತದೆ.

ಮಿತವ್ಯಯದ ಸಮೂಹ ಪ್ರವಾಸ: ಇನ್ನುಳಿದಂತೆ ದೇಶಿಯ ಪ್ರವಾಸಗಳ ಬೇಡಿಕೆ ದುಪ್ಪಟ್ಟಾಗಿದೆ. ಭಾರತದಾದ್ಯಂತ ನಮ್ಮ ದಕ್ಷಿಣ ಭಾರತೀಯ ಉಟೋಪಹಾರ, ಹವಾ ನಿಯಂತ್ರಿತ ವಾಹನಗಳಲ್ಲಿ ಪ್ರಯಾಣ, ಅತ್ಯುತ್ತಮ ಹೋಟೆಲ್‌ಗಳ ವಾಸ್ತವ್ಯ, ಅನುಭವಿ ಟೂರ್ ಮ್ಯಾನೇಜರ್ ಗಳ ಸೇವೆ ಇವೆಲ್ಲ ಸೇರಿ ಪ್ರವಾಸವನ್ನು ಅವಿಸ್ಮರಣೀಯ ವನ್ನಾಗಿಸುತ್ತದೆ. ಇದಲ್ಲದೆ ಗ್ರಾಹಕರಿಗೆ ಅನುಕೂಲಿತ ಮತ್ತು ಮಧುಚಂದ್ರ ಪ್ರವಾಸಗಳು ಪ್ರವಾಸಿಗರ ಆಯ್ಕೆಯಾದ ದಿನಾಂಕಕ್ಕೆ ಅವರ ಆದಾಯಕ್ಕ ಅನುಗುಣವಾಗಿ ಪಂಚಾತಾರಾ ಸೌಲಭ್ಯಗಳೊಂದಿಗೆ, ವ್ಯವಸ್ಥೆ ಮಾಡುವ ಸಾಮರ್ಥ್ಯ ಅಡಿಗಾಸ್ ಸಂಸ್ಥೆ ಹೊಂದಿದೆ. ನಿಮ್ಮ ಆಯ್ಕೆಯ ದೇಶಿಯ ಅಥವಾ ವಿದೇಶಿ ಪ್ರವಾಸಿ ತಾಣಕ್ಕೆ, ನೀವು ಇಚ್ಚಿಸಿದ ದಿನಾಂಕದಲ್ಲಿ, ನಿಮ್ಮ ಆದಾಯಕ್ಕನು ಗುಣವಾಗಿ ಯೋಜಿಸುವ ಪ್ರವಾಸವೇ Customised ಟೂರ್. 500ಕ್ಕೂ ಹೆಚ್ಚಿನ ಪ್ರವಾಸಗಳು ಈ ಪ್ರಕಾರ ದಲ್ಲಿ ಲಭ್ಯವಿದೆ.

ಅಂತಾರಾಷ್ಟ್ರೀಯ ಪ್ರವಾಸ

